

# ಸಿಹಿ ಕಹಿ

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT

ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor : MARUTI BASAVANTAPPA HOSAMANI

Cell : +91 9741319119

Volume : 08 Issue : 39 Friday 17-10-2025 E-mail : maruti.b.hosamani76@gmail.com Page: 4 Price : Rs. 1/-


## ಮಾಜಿ ಸಚಿವರಾದ ಸಾ.ರಾ ಮಹೇಶ್ ರವರು ನೀಡಿದ್ದ ?1 ಲಕ್ಷದ ಚೆಕ್ಕನ್ನು ಮಗಳನ್ನು ಕಳೆದುಕೊಂಡ ಅಲೆಮಾರಿ ಕುಟುಂಬಕ್ಕೆ – ಡಿ.ಎಸ್.ಎಸ್ ರಾಜ್ಯ ನಾಯಕ ರಿಂದ ವಿತರಣೆ



**ಸಿಹಿ ಕಹಿ ಸುದ್ದಿ,**

**ಕಲಬುರ್ಗಿ:** ಮೈಸೂರು ನಗರದಲ್ಲಿ ಇತ್ತೀಚಿಗೆ ಅಲೆಮಾರಿ ಕುಟುಂಬದ 10 ವರ್ಷದ ಬಾಲಕಿಯ ಮೇಲೆ ಅತ್ಯಾಚಾರವೆಸಗಿ ಕೊಲೆಯಾಗಿದ್ದ ಬಾಲಕಿಯ ನಿರ್ಗತಿಕ ಅಲೆಮಾರಿ ಕುಟುಂಬಕ್ಕೆ ಮಾಜಿ ಸಚಿವರಾದ ಸಾ.ರಾ ಮಹೇಶ್ ರವರು ನೀಡಿದ್ದ 1 ಲಕ್ಷ ರೂ. ಗಳ ಚೆಕ್ಕನ್ನು ದಿನಾಂಕ : 15–10–2025 ರ ಬುಧವಾರ ಮೈಸೂರು ಜಿಲ್ಲಾ ದಸಂಸ ನಿಯೋಗವು ಗುಲ್ಬರ್ಗಾಕ್ಕೆ ತೆರಳಿ ಬಾಲಕಿಯ ನಿರ್ಗತಿಕ ಅಲೆಮಾರಿ ಕುಟುಂಬವನ್ನು ಭೇಟಿ ಮಾಡಿ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ದಸಂಸದ ಕೆ. ನಂಜಪ್ಪ ಬಸವನಗುಡಿ ರವರು ಬಾಲಕಿಯ ತಂದೆ ತಾಯಿಗೆ ಚೆಕ್ಕನ್ನು ಕೊಟ್ಟು ಮಾತನಾಡಿ ಹುಟ್ಟು ಸಾವುಗಳಿಗೆ ದಾಖಲೆಗಳೇ ಇಲ್ಲದೆ ಅವಮಾನ ಹಂಗಿನ ಜೀವನವನ್ನು ಸಾಗಿಸುತ್ತಾ ನೆಲೆಯೇ ಇಲ್ಲದೆ ಹೊಟ್ಟೇ ಪಾಡಿಗಾಗಿ ಗುಲ್ಬಾರ್ಗಾದಿಂದ ಮೈಸೂರು ದಸರಾಕ್ಕೆ ಅಂಬಿಕಾ ದೇಸು ದಂಪತಿಗಳು ತಮ್ಮ ಜೊತೆ 10 ವರ್ಷದ ಮಗಳೊಂದಿಗೆ ಬಲೂನ್ ಮಾರಾಟ ಮಾಡಲು ಬಂದಿದ್ದ ಸಂದರ್ಭದಲ್ಲಿ ಕಿರಾತಕ ವ್ಯಕ್ತಿಯೊಬ್ಬ ಅತ್ಯಾಚಾರವೆಸಗಿ ಭೀಕರವಾಗಿ ಕೊಲೆ ಮಾಡಿರುವುದು ಮನುಕುಲವೇ ಆತಂಕ ಪಡುವಂತಾಗಿದ್ದು, ಸಾಂಸ್ಕೃತಿಕ ನಗರಿ ಮೈಸೂರಿಗೆ ಒಂದು ಕಪ್ಪು ಚುಕ್ಕೆಯಾಗಿದೆ. ಮಗಳನ್ನು ಕಳೆದುಕೊಂಡ ನಿರ್ಗತಿಕ ಅಲೆಮಾರಿ ಕುಟುಂಬಕ್ಕೆ ಮಾಜಿ ಸಚಿವರಾದ ಸಾ.ರಾ ಮಹೇಶ್ ರವರು ಅವರ ಕುಟುಂಬದ ವತಿಯಿಂದ ಈ ನೊಂದ ಕುಟುಂಬಕ್ಕೆ 1 ಲಕ್ಷ ರೂ. ಗಳ ಚೆಕ್ಕನ್ನು ಕೊಡುವುದಾಗಿ ಘೋಷಿಸಿ ಈ ಚೆಕ್ಕನ್ನು ಅಲೆಮಾರಿ ಸಮುದಾಯಗಳ ಬಗ್ಗೆ ಸದಾ ಹೋರಾಡುತ್ತಿರುವ ದಸಂಸದ ನಿಂಗರಾಜ್ ಮಲ್ಲಾಡಿಯವರ ಮೂಲಕವೇ ಈ ನೊಂದ ನಿರ್ಗತಿಕ ಅಲೆಮಾರಿ ಕುಟುಂಬಕ್ಕೆ ಚೆಕ್ಕನ್ನು ತಲುಪಿಸುವಂತೆ ತಿಳಿಸಿದ್ದರು. ಈ ಹಿನ್ನಲೆಯಲ್ಲಿ ನಮ್ಮ ನಾಯಕರಾದ ನಿಂಗರಾಜ್ ಮಲ್ಲಾಡಿ ರವರ ಸೂಚನೆ ಮೇರೆಗೆ ಇಂದು ಗುಲ್ಬಾರ್ಗಾದ ತಾಜ್ ಸುಲ್ತಾನ್ ನಲ್ಲಿರುವ ಅಲೆಮಾರಿಗಳ ಗುಡಿಸಲಿಗೆ ಬಂದು ಈ 1 ಲಕ್ಷ ರೂ. ಗಳ ಚೆಕ್ಕನ್ನು ಮೃತ ಬಾಲಕಿಯ ತಂದೆ ತಾಯಿಯರಾದ ಅಂಬಿಕಾ, ದೇಸು ರವರಿಗೆ ತಲುಪಿಸಲಾಯಿತು. ಮಗಳನ್ನು ಕಳೆದುಕೊಂಡು ರೋಧಿಸುತ್ತಿರುವ ಈ ಅಲೆಮಾರಿ ಕುಟುಂಬದ ನೋವಿಗೆ ಸ್ಪಂದಿಸಿರುವ ಸಾ.ರಾ ಮಹೇಶ್ ರವರಿಗೆ ಎಲ್ಲಾ ದಲಿತರ, ನೊಂದವರ, ಅಲೆಮಾರಿಗಳ ಪರವಾಗಿ ದಸಂಸದ ವತಿಯಿಂದ ಅಭಿನಂದನೆ ಸಲ್ಲಿಸುತ್ತಿದ್ದೇವೆ ಎಂದರು.

ಈ ಸಂದರ್ಭದಲ್ಲಿ ಮೈಸೂರು ಅಲೆಮಾರಿ ಸಂಘದ ಅಧ್ಯಕ್ಷರಾದ ವೆಂಕಟೇಶ್ ಏಕಲವ್ಯ ನಗರ, ಬಾಲಕಿಯ ತಂದೆ ದೇಸು, ತಾಯಿ ಅಂಬಿಕಾ ಹಾಗೂ ಸ್ಥಳೀಯ ಅಲೆಮಾರಿ ಸಮುದಾಯದ ಇತರೆ ಮುಖಂಡರು ಹಾಜರಿದ್ದರು.

"ಹಸಿದವರು, ನೊಂದವರು, ಬೀದಿಯಲ್ಲಿ ಬಿದ್ದ ಎಲ್ಲಾ ಜಾತಿಯ ನೊಂದ ಜನರಿಗೆ ರಾಜ್ಯ ಡಿ.ಎಸ್.ಎಸ್ ಸಂಘವು ಸದಾ ಧ್ವನಿ ಯಾಗಿರುತ್ತದೆ" ? ಎಂದ ನಿಂಗರಾಜ್ ಮಲ್ಲಾಡಿಯವರು.

## ರೈತರ ಹಿತಕ್ಕಾಗಿ ಜನಸೇವಾ ಫೌಂಡೇಶನ್–ಹೋರಾಟದ ಎಚ್ಚರಿಕೆ





**ಸಿಹಿ ಕಹಿ ಸುದ್ದಿ,**

**ಮಾನ್ವಿ:** ತಾಲೂಕಿನ ಶ್ರೀ ರಾಘವೇಂದ್ರ ಟ್ರೇಡಿಂಗ್ ಕಂಪನಿ ಹಾಗೂ ಶ್ರೀ ಸೂಗುರೇಶ್ವರ ಟೆಂಡರ್ಸ್ ಮಾನ್ವಿ ಇವರಿಂದ ಆಂಧ್ರಪ್ರದೇಶ ಮೂಲದ ನೀಲಕಂಠೇಶ್ವರ ಸೀಡ್ಸ್ ಕಾರ್ಪೊರೇಷನ್ ಸಂಸ್ಥೆಯ ಕಳಪೆ ಗುಣಮಟ್ಟದ ಬತ್ತದ ಬೀಜ ರೈತರಿಗೆ ಮಾರಾಟವಾಗಿರುವ ಪ್ರಕರಣ ಬೆಳಕಿಗೆ ಬಂದಿದೆ. ಈ ಬೀಜಗಳು ರೋಗ ನಿರೋಧಕ ಶಕ್ತಿ ಕಳೆದುಕೊಂಡಿದ್ದು,

ಇಳುವರಿ ತೀವ್ರವಾಗಿ ಕಡಿಮೆಯಾಗುವ ಸಾಧ್ಯತೆ ಇದೆ ಎಂದು ಜನಸೇವಾ ಫೌಂಡೇಶನ್ ತಾಲೂಕು ಅಧ್ಯಕ್ಷ ತಾಜುದ್ದೀನ್ ಚೀಕಲಪರ್ವಿ ಹೇಳಿದರು.

ಅವರು ಇಂದು ಪಟ್ಟಣದ ಗ್ರೇಡ್–2 ತಹಸೀಲ್ದಾರ್ ಅಬ್ದುಲ್ ವಾಹಿದ್ ಹಾಗೂ ಸಹಾಯಕ ಕೃಷಿ ನಿರ್ದೇಶಕರಿಗೆ ಮನವಿ ಪತ್ರ ಸಲ್ಲಿಸಿ ಮಾತನಾಡುತ್ತಾ

"ಕಳಪೆ ಬೀಜ ಮಾರಾಟದ ಪರಿಣಾಮ ಸಾವಿರಾರು ರೈತರು ಬೆಳೆ ಹಾನಿಯ ಸಂಕಷ್ಟಕ್ಕೆ ಒಳಗಾಗುವ ಪರಿಸ್ಥಿತಿ ನಿರ್ಮಾಣವಾಗಿದೆ. ತಪ್ಪಿತಸ್ಥ ಬೀಜ ಮಾರಾಟಗಾರರ ವಿರುದ್ಧ ತಕ್ಷಣ ಕ್ರಮ ಕೈಗೊಂಡು,

ರೈತರಿಗೆ ಸಮರ್ಪಕ ಪರಿಹಾರ ನೀಡಬೇಕು," ಎಂದು ಹೇಳಿದರು.

ಕಳಪೆ ಬತ್ತದ ಬೀಜ ಮಾರಾಟ ಮಾಡಿದ ಕಂಪನಿಗಳ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ, ಅಂಗಡಿಗಳ ಎದುರು ಹೋರಾಟ ನಡೆಸುವುದಾಗಿ ಎಚ್ಚರಿಸಿದರು.

ಈ ಸಂದರ್ಭದಲ್ಲಿ ತಾ.ಪ್ರ.ಕಾ ಹಸನ್ ಚಿಕಲಪರ್ವಿ, ಕಾರ್ಯದರ್ಶಿ ರಾಜಾಸಾಬ್ ನೀರಮಾನ್ವಿ, ಸಂ.ಕಾ ಸಿದ್ದರೆಡ್ಡಿ, ಸದಸ್ಯರಾದ ಮೌಲ, ಆಜೀತ್, ಗೊಕುಲ್ ಸೇರಿದಂತೆ ಅನೇಕ ರೈತರು ಇದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಹುಸೇನ್.ಭಾಷಾ. ನಕ್ಕುಂದಿ.ಮಾನ್ವಿ**

## ನೇಕಾರ ಸೇವಾ ಸಂಘ ವಿರುದ್ಧ ಬಿಜೆಪಿ ಕಾರ್ಯಕರ್ತರ ಆಕ್ರೋಶ!



**ರಬಕವಿ–ಬನಹಟ್ಟಿ :** ಶಾಸಕ ಸಿದ್ದು ಸವದಿ ಕೆ–ಎಚ್‌ಡಿಸಿ ಅಧ್ಯಕ್ಷರಾದಾಗ ನಡೆದ ಅವ್ಯವಹಾರ ಕುರಿತಾಗಿ ರಾಜ್ಯ ನೇಕಾರ ಸೇವಾ ಸಂಘದ ಅಧ್ಯಕ್ಷ ಶಿವಲಿಂಗ ಟಿರಕಿ ನೀಡಿರುವ ಹೇಳಿಕೆ ವಿರುದ್ಧ ಬನಹಟ್ಟಿ ಪೋಲೀಸ್‌ಠಾಣೆಯಲ್ಲಿ ಬಿಜೆಪಿ ನಗರಾಧ್ಯಕ್ಷ ಶ್ರೀಶೈಲ ಬೀಳಗಿ ದೂರು ನೀಡಿದ್ದ ಹಿನ್ನೆಲೆಯಲ್ಲಿ ವಿಚಾರಣೆಗೆ ಆಗಮಿಸಿದ್ದ ಟಿರಕಿ ಮತ್ತವರ ಬೆಂಬಲಿಗರನ್ನು ಸುತ್ತುವರೆದು ಬಿಜೆಪಿ ಕಾರ್ಯಕರ್ತರು ಆರೋಪದ ಬಗ್ಗೆ ಸಾಕ್ಷಿ ಒದಗಿಸಲು ಪಟ್ಟು ಹಿಡಿದರು.

ಅವ್ಯವಹಾರ ನಡೆದ ಬಗ್ಗೆ ಶಾಸಕರೇ ಒಂದು ಸಂದರ್ಶನದಲ್ಲಿ ಒಪ್ಪಿಕೊಂಡಿದ್ದು ಮತ್ತು ಸದನದಲ್ಲಿ ಜವಳಿ ಸಚಿವರು ನಿಗಮದಲ್ಲಿ ನಡೆದ ಅವ್ಯವಹಾರದ ತನಿಖೆ ನಡೆಸುವ ಹೇಳಿಕೆ ನೀಡಿರುವುದು ಮಾಧ್ಯಮಗಳಲ್ಲಿ ಬಿತ್ತರಗೊಂಡಿವೆ.

ಅವ್ಯವಹಾರದ ಬಗ್ಗೆ ಜಿಲ್ಲಾಧಿಕಾರಿಗಳು ಸೇರಿ ಸಚಿವರು, ಸಿಎಂಗೆ ಮನವಿ ಸಲ್ಲಿಸಿ ನೇಕಾರ ಸಂಘಟನೆ ಆಗ್ರಹಿಸಿದೆಯಲ್ಲದೇ ದಾಖಲೆಗಳು ನಮ್ಮ ಬಳಿ ಇವೆಯೆಂದು ಟಿರಕಿ ಸ್ಪಷ್ಟನೆ ನೀಡಿದರು.

ಬಿಜೆಪಿ ಸದಸ್ಯರ ಮತ್ತು ನೇಕಾರ, ರೈತ ಸಂಘಟನೆಗಳ ಧುರೀಣರ ನಡುವೆ ವಾಗ್ಯುದ್ಧ ಬಿರುಸುಗೊಂಡಾಗ, ಪಿಎಸ್ಸೈ ಶಾಂತಾ ಹಳ್ಳಿ ಉಭಯತರರಿಗೆ ದೂರು ಸ್ವೀಕರಿಸುವುದು ನಮ್ಮ ವ್ಯಾಪ್ತಿಯಲ್ಲಿ ಇಲ್ಲದಿದ್ದಾಗ್ಯು ಸಣ್ಣ ಕಿಡಿ ದಳ್ಳುರಿ ಆಗಬಾರದೆಂದು ಸ್ವೀಕರಿಸಿದ್ದು, ಸಂಯಮ ಮೀರಿದರೆ ಕಾರಣರಾದವರನ್ನು ಮುಲಾಜಿಲ್ಲದೇ ಒಳಹಾಕಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

ಪರಸ್ಪರರು ಶಾಂತಿ ಕಾಯ್ದುಕೊಳ್ಳುವಂತೆ ಎಚ್ಚರಿಸಿ ಮತ್ತು ಭೃಷ್ಟಾಚಾರದ ದಾಖಲೆಗಳಿದ್ದಲ್ಲಿ ಸಂಬಂಧಿತ ಇಲಾಖೆಯಲ್ಲಿ ಪ್ರಕರಣ ದಾಖಲಿಸಿ ಮುಂದುವರೆಯಿರಿ.

ಸುಮ್ಮನೇ ಆರೋಪ ಮಾಡುತ್ತ ಶಾಂತಿ ಕದಡಬಾರದೆಂದು ಎಚ್ಚರಿಕೆ ನೀಡಿದರು.

> ನಾನು ಮಾಡಿರುವ ಆರೋಪದಿಂದ ಹಿಂದೆ ಸರಿಯುವ ಪ್ರಶ್ನೆಯೇ ಇಲ್ಲ. ಶಾಸಕ ಸಿದ್ದು ಸವದಿ ಅಧ್ಯಕ್ಷರಾದಾಗಲೇ ನಿಗಮದಲ್ಲಿ 106 ಕೋಟಿ ಮೊತ್ತದ ಭೃಷ್ಟಾಚಾರ ಆಗಿದ್ದು ಇದ–ರಿಂದ ನೇಕಾರರಿಗೆ ಅನ್ಯಾಯವಾಗಿದೆ. ಇದಕ್ಕೆ ಮೂವರು ಅಧಿಕಾರಿಗಳ ತಲೆದಂಡ ಆಗಿದೆ. ನಮ್ಮ ಬಳಿ ಅಗತ್ಯ ದಾಖಲೆಗಳಿದ್ದು, ಮುಂದಿನ ಕ್ರಮಕ್ಕೆ ನೇಕಾರ ಸಂಘಟನೆ ಬದ್ಧವಾಗಿದೆ.
>
> । ಶಿವಲಿಂಗ ಟಿರಕಿ. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ನೇಕಾರ ಸೇವಾ ಸಂಘ.

> ನೇಕಾರ ಸಂಘಟನೆ ರಾಜ್ಯಾಧ್ಯಕ್ಷ ಟಿರಕಿ ಗಾಳಿಯಲ್ಲಿ ಗುಂಡು ಹಾರಿಸುತ್ತ ಶಾಸಕ ಸಿದ್ದು ಸವದಿ ಹೆಸರಿಗೆ ಕಳಂಕ ತರುತ್ತಿದ್ದಾರೆ. ತಮ್ಮಲ್ಲಿ ದಾಖಲೆಗಳಿದ್ದರೆ ಲೋಕಾಯುಕ್ತ ಇಲ್ಲವೇ ಬೇರೆ ಸಂಸ್ಥೆಗಳಲ್ಲಿ ಪ್ರಕರಣ ದಾಖಲಿಸಲಿ ಸತ್ಯವಿದ್ದರೆ ನಾವೂ ಬೆಂಬಲಿಸುತ್ತೇವೆ. ದಾಖಲೆಗಳನ್ನು ಮುಂದಿಡದೇ ಸುಖಾಸುಮ್ಮನೇ ಆರೋಪ ಮಾಡುತ್ತ ಮಾನಹಾನಿ ಮಾಡುವುದು ನಮ್ಮ ಸಹನೆ ಕೆಣಕಿದಂತಾಗುತ್ತದೆ.
>
> । ಶ್ರೀಶೈಲ ಬೀಳಗಿ. ಅಧ್ಯಕ್ಷರ ನಗರ ಬಿಜೆಪಿ.

## ಜಲಾವೃತಗೊಂಡ ರಸ್ತೆಯಲ್ಲಿ ಸಿಲುಕಿದ ಶಾಲಾ ವಾಹನ। ಎಚ್ಚೆತ್ತುಕೊಳ್ಳದ ಅಧಿಕಾರಿಗಳು। ಗುಡುಗು ಮಿಂಚಿನೊಂದಿಗೆ ಅಬ್ಬಾರಿಸಿದ ಮಳೆರಾಯ ಬೆಚ್ಚಿದ ಜನತೆ





**ಜಮಖಂಡಿ :** ಇಲ್ಲಿ ಕಳೆದ ಮೂರು ದಿನಗಳಿಂದ ಬಿಸಿಲಿನ ತಾಪಮಾನ ಹೆಚ್ಚಾಗುವ ಮೂಲಕ ಬೇಸಿಗೆ ಕಾಲದ ವಾತಾವರಣ ನಿರ್ಮಾಣಗೊಂಡಿತ್ತು. ಸಂತೆ ದಿನವಾದ ಗುರುವಾರ ಮುಂಜಾನೆ ತುಂತುರು ಮಳೆ ಆರಂಭ ಗೊಂಡರೂ ಬಹಳ ಹೊತ್ತು ಮಳೆಯಾಗದೇ ನಿರಾಶೆ ಮೂಡಿಸಿತು.

ಆದರೆ ಬಿಸಿಲು ಹೆಚ್ಚಾದಂತೆ ಮಳೆಯಾಗುವದಿಲ್ಲ ಎಂದುಕೊಂಡಿದ್ದ ಜನರಿಗೆ ಮಧ್ಯಾಹ್ನ ಮೂರು ಗಂಟೆಗೆ ಘರ್ಜನೆಯೊಂದಿಗೆ ಆರಂಭಗೊಂಡ ಮಳೆಗೆ ತಾಲೂಕಿನ ಜನತೆಯಲ್ಲಿ ಭಯದ ವಾತಾವರಣ ಮೂಡಿಸಿತು.

ಸತತ ಎರಡು ಗಂಟೆಯವರೆಗೆ ಸುರಿದ ಭಯಂಕರ ಮಳೆಯಿಂದ ರಸ್ತೆಗಳಲ್ಲಿ ನೀರು ತುಂಬಿಕೊಂಡು ರಸ್ತೆಗಳಲ್ಲಿ ಸಂಚಾರಿಸುವುದೆ ದುಸ್ತರವಾಯಿತು.

ಸತತವಾಗಿ 6 ರಿಂದ 8 ಸಲ ಘರ್ಜಿಸಿದ ಗುಡುಗು ಸಿಡಿಲುಗಳು ಮನೆಯ ಮೇಲೆಯೇ ಬೀಳುತ್ತಿವೆಯೇನೋ ಎಂಬಂತೆ ಭಾಸವಾಯಿತು. ಮನೆಯಲ್ಲಿದ್ದ ಮಕ್ಕಳು ಸುರಕ್ಷಿತವಾಗಿದ್ದರೆ, ಪಾಲಕರಿಗೆ ಶಾಲೆಗೆ ಹೋಗಿದ್ದ ಮಕ್ಕಳ ಚಿಂತೆ ಹೆಚ್ಚಾಗಿತ್ತು.

**ಆತಂಕದಲ್ಲಿ ಶಾಲಾ ಮಕ್ಕಳು:**

ದಿನನಿತ್ಯ ಶಾಲೆಗಳು ಬೆಳಿಗ್ಗೆ ಆರಂಭಗೊಂಡು ಮಧ್ಯಾಹ್ನ 3–30 ಕ್ಕೆ ಶಾಲೆ ಬಿಡುವ ಸಮಯದಲ್ಲಿ ಆರ್ಭಟಿಸುತ್ತ ಬಂದ ಮಳೆರಾಯ ಒಂದು ಕ್ಷಣವೂ ನಿಲ್ಲದೆ ಧಾರಕಾರವಾಗಿ ಎರಡು ಗಂಟೆಗಳ ಕಾಲ ಸುರಿಯುವ ಮೂಲಕ ಪಾಲಕರಲ್ಲಿ ಮತ್ತು ಮಕ್ಕಳಲ್ಲಿ ಆತಂಕ ಮೂಡಿಸಿತ್ತು. ಕೆಲವೊಂದು ಶಾಲೆಗಳ ಶಿಕ್ಷಕರು ಮತ್ತು ಸೆಕ್ಯೂರಿಟಿ ಗಾರ್ಡಗಳು ತಮ್ಮ ಮೊಬೈಲ್ ಮೂಲಕ ಪಾಲಕರಿಗೆ ತಮ್ಮ ಮಕ್ಕಳೊಂದಿಗೆ ಮಾತನಾಡಿಸುವ ಮೂಲಕ ಭಯದ ಆತಂಕ ಕಡಿಮೆಗೊಳಿಸುವ ಸನ್ನಿವೇಶ ನಡೆದವು.

**ನೀರಿನಲ್ಲಿ ಸಿಲುಕಿದ ಶಾಲಾ ವಾಹನ:**

ನಗರದ ದಿವಂಗತ ಸಿದ್ದು ನ್ಯಾಮಗೌಡ ಬೈಪಾಸ್ ರಸ್ತೆಯಲ್ಲಿನ ಸರಕಾರಿ ನೂತನ ವಿದ್ಯಾಲಯ ಶಾಲೆಯ ಹತ್ತಿರ ಅವೈಜ್ಞಾನಿಕ ರೀತಿಯಲ್ಲಿ ನಿರ್ಮಿಸಿರುವ ರಸ್ತೆ ಜಲಾವೃತಗೊಂಡಿತ್ತು. ಜಲಾವೃತಗೊಂಡ ರಸ್ತೆ ಸಂಚಾರ ಸ್ಥಗಿ–ತಗೊಂಡು ರಸ್ತೆಯಲ್ಲಿ ನಗರದ ಖಾಸಗಿ ಶಾಲೆ ಬಸ್ ಸಿಲುಕಿಕೊಂಡಿತ್ತು. ಶಾಲೆಯಿಂದ ಮಕ್ಕಳನ್ನು ಮನೆಗೆ ತಲುಪಿಸುವ ಬಸ್ಸು ಎರಡು ಅಡಿ ನೀರಿನಲ್ಲಿ ನಿಂತಿದೆ. ಬಸ್ಸಿನಲ್ಲಿ ವಿದ್ಯಾರ್ಥಿಗಳು ಸಿಲುಕಿಕೊಂಡಿದ್ದು, ಘಟನಾ ಸ್ಥಳಕ್ಕೆ ಶಹರ ಠಾಣೆ ಪಿ.ಎಸ್.ಐ. ಅನೀಲ ಕುಂಬಾರ ಸಹಿತ ವಿವಿಧ ಇಲಾಖೆಗಳ ಅಧಿಕಾ–ರಿಗಳು ಆಗಮಿಸಿದ್ದರು. ಈ ರಸ್ತೆಯ ಅವ್ಯವಸ್ಥೆ ಕುರಿತು ವಿಶೇಷ ವರದಿಗಳು ಪತ್ರಿಕೆಯಲ್ಲಿ ಪ್ರಕಟಗೊಂಡಿದ್ದರೂ ಕೂಡ ಸಂಬಂಧಿಸಿದ ಅಧಿಕಾರಿಗಳು ಇನ್ನೂವರೆಗೆ ಎಚ್ಚೆತ್ತುಕೊಂಡಿಲ್ಲ.

**ತಗ್ಗು–ಗುಂಡಿಗಳು ಭರ್ತಿ:**

ಗುರುವಾರ ಧಾರಕಾರವಾಗಿ ಸುರಿದ ಮಳೆಯಿಂದ ನಗರದ ಬಹುತೇಕ ಬಡಾವಣೆಗಳಲ್ಲಿ ತಗ್ಗು–ಗುಂಡಿಗಳು ಭರ್ತಿಯಾಗಿ , ರಸ್ತೆಗಳಲ್ಲಿ ನೀರು ಮಡುಗಟ್ಟಿತ್ತು. ಜಲಾವೃತಗೊಂಡ ರಸ್ತೆಗಳಲ್ಲಿ ವಾಹನ ರಸ್ತೆ ಸಂಚಾರ, ಜನಜೀವನ ಅಸ್ತವ್ಯಸ್ತವಾಗಿತ್ತು. ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಕೂಡ ನೀರು ಸಂಗ್ರಹವಾಗಿ ಪ್ರಯಾಣಿಕರು ಪರದಾಡುವಂತಾಗಿತ್ತು.

## ನ.9ಕ್ಕೆ ಕೆಯುಡಬ್ಲ್ಯೂಜೆ ಚುನಾವಣೆ

**ಬೆಂಗಳೂರು :** ರಾಜ್ಯದ ಪತ್ರಕರ್ತರ ಪ್ರತಿಷ್ಠಿತ ಪ್ರಾತಿನಿಧಿಕ ಸಂಘಟನೆಯಾದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ 2025–28 ನೆಯ ಅವಧಿಯ ಆಡಳಿತ ಮಂಡಳಿಯ ಆಯ್ಕೆಗಾಗಿ ಚುನಾವಣೆ ಘೋಷಣೆ? ಮಾಡಲಾಗಿದೆ.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು 9,000 ಸಾವಿರಕ್ಕೂ ಹೆಚ್ಚು ಸಕ್ರೀಯ ಕಾರ್ಯನಿರತ ಪತ್ರಕರ್ತ ಸದಸ್ಯರುಗಳನ್ನೊಳಗೊಂಡ ಬೃಹತ್ ಸಂಘಟನೆಯಾಗಿದೆ. ಕಾರ್ಮಿಕ ಇಲಾಖೆಯ ಉಸ್ತುವಾರಿಯಲ್ಲಿ ಸಂಘದ ರಾಜ್ಯ ಘಟಕವೂ ಸೇರಿದಂತೆ ಎಲ್ಲಾ ಜಿಲ್ಲಾ ಘಟಕದ ಆಡಳಿತ ಮಂಡಳಿಗೆ ಏಕ ಕಾಲದಲ್ಲಿ ಚುನಾವಣೆ ನಡೆಯಲಿದೆ.


ಅಕ್ಟೋಬರ್13ರಂದು ಸೋಮವಾರ ಚುನಾವಣಾ ಅಧಿಸೂಚನೆ ಹೊರಡಿಸಲಾಗುವುದು. ಅಂದೇ ವೇಳಾಪಟ್ಟಿ ಪ್ರಕಟಗೊಳ್ಳಲಿದ್ದು, ಮತದಾರರ ಕರಡು ಪ್ರತಿ ಪ್ರಕಟವಾಗಲಿದೆ. ಅಕ್ಟೋಬರ್ 19 ರಿಂದ ನಾಮಪತ್ರ ಸಲ್ಲಿಕೆ ಆರಂಭವಾಗಲಿದೆ. ಅಕ್ಟೋಬರ 27 ನಾಮಪತ್ರ ಸಲ್ಲಿಕೆಗೆ ಕೊನೆಯ ದಿನವಾಗಿದೆ. ಅಕ್ಟೋಬರ್ 28 ನಾಮಪತ್ರಗಳ ಪರಿಶೀಲನೆ, 30 ರಂದು ನಾಮಪತ್ರಗಳನ್ನು ಹಿಂತೆಗೆದುಕೊಳ್ಳುವ ಕೊನೆಯ ದಿನವಾಗಿರುತ್ತದೆ.

ನವೆಂಬರ್ 9 ಭಾನುವಾರ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಕೇಂದ್ರ (ಕೆಯುಡಬ್ಲ್ಯೂಜೆ )ಕಚೇರಿ, ಕಂದಾಯ ಭವನ, 3 ನೇ ಮಹಡಿ, ಕೆ.ಜಿ. ರಸ್ತೆ, ಬೆಂಗಳೂರು –560 009 ಇಲ್ಲಿ ಮತ್ತು ಆಯಾ ಜಿಲ್ಲಾ ಕೇಂದ್ರಗಳಲ್ಲಿ ಬೆಳಿಗ್ಗೆ 9 ರಿಂದ ಮದ್ಯಾಹ್ನ 3 ಗಂಟೆಯವರೆಗೆ ಅವಷ್ಯಕವೆನಿಸಿದರೆ ಮತದಾನ ನಡೆಯಲಿದೆ. ಮತದಾನ ಬಳಿಕ ಅದೇ ದಿನ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ ಎಂದು ಕೆಯುಡಬ್ಲ್ಯೂಜೆ ಮುಖ್ಯ ಚುನಾವಣಾಧಿಕಾರಿ ಎನ್. ರವಿಕುಮಾರ (ಟೆಲೆಕ್ಸ್) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಬನಹಟ್ಟಿಯ ಶ್ರೀಮಲ್ಲಿಕಾರ್ಜುನ ಜಾತ್ರೆ ನಿಮಿತ್ಯ ಮಂಗಳವಾರದಂದು ನಡೆಯಲಿರುವ ರಾಷ್ಟ್ರ ಮಟ್ಟದ ಕುಸ್ತಿ ಪಂದ್ಯಗಳಲ್ಲಿ ಸಾನಿಧ್ಯ ವಹಿಸಲು ಬಂಡಿಗಣಿ ಬಸವಗೋಪಾಲ ನೀಲಮಾಣಿಕ ಮಠದ ಚಕ್ರವರ್ತಿ ದಾನೇಶ್ವರಶ್ರೀಗಳನ್ನು ಸೋಮವಾರ ಪೇಟ ದೈವಮಂಡಳಿ ವತಿಯಿಂದ ಅಧ್ಯಕ್ಷ ಮಲ್ಲಿಕಾರ್ಜುನ ತುಂಗಳ, ಬ್ರಿಜ್‌ಮೋಹನ ಢಾಗಾ ಮೊದಲಾದವರ ತಂಡ ಆಮಂತ್ರಣ ನೀಡಿ ಸ್ವಾಗತಿಸಿದರು.**

## ಹಿರಿಯ ನ್ಯಾಯವಾದಿ ರವಿಕಿರಣ್ ಮುರುಡೇಶ್ವರ ಅವರಿಂದ – ರಾಜ್ಯದ ಜನತೆಗೆ ಅತ್ಯಂತ ಪ್ರಮುಖ ಎಚ್ಚರಿಕೆ....!



**ಸಿಹಿ ಕಹಿ ಸುದ್ದಿ,**

**ಉಡುಪಿ :** ಕಾನೂನು ಪಾಲನೆಯ ಮಹತ್ವ ಮತ್ತು ಅದರ ಬಗ್ಗೆ ಜನಸಾಮಾನ್ಯರಲ್ಲಿ ಇರಬೇಕಾದ ಕಡ್ಡಾಯ ಅರಿವಿನ ಕುರಿತು ಹಿರಿಯ ನ್ಯಾಯವಾದಿ ರವಿಕಿರಣ್ ಮುರುಡೇಶ್ವರ ಅವರು ನೀಡಿರುವ ಸಂದೇಶವು ಇದೀಗ ರಾಜ್ಯ ಮಟ್ಟದಲ್ಲಿ ಭಾರಿ ಗಮನ ಸೆಳೆದಿದೆ. ಅವರು ನೀಡಿರುವ ಎಚ್ಚರಿಕೆ ಕಾನೂನು ಸುವ್ಯವಸ್ಥೆ ಮತ್ತು ನಾಗರಿಕರ ಜವಾಬ್ದಾರಿಯ ಕುರಿತು ಸ್ಪಷ್ಟಪಡಿಸಿದೆ ಎಂದು ನ್ಯಾಯವಾದಿ ರವಿಕಿರಣ್ ಮುರುಡೇಶ್ವರ ಅವರು ಪ್ರಮುಖ ಸಂದೇಶವನ್ನು ತಿಳಿಸಿದ್ದಾರೆ.

ಕಾನೂನಿನ ಮೂಲ ತತ್ವ "ಇಗ್ನೋರೆನ್ಸ್ ಆಫ್ ಲಾ ಇಸ್ ನಾಟ್ ಆನ್ ಎಕ್ಸ್ಕ್ಯೂಸ್" (ಖಿರಂಟಿಂಡಿಚಿಟಿಛಿಜ ಡಜಿ ಟಚಿತಿ ನ ಟಿಂಣ ಚಿಟಿ ಜಥ–ಛಿಣಾಜ) ಎಂಬ ಅಂತರರಾಷ್ಟ್ರೀಯ ತತ್ವವನ್ನು ಒತ್ತಿ ಹೇಳಲಾಗಿದೆ.

ಪ್ರಮುಖ ಎಚ್ಚರಿಕೆ "ನಮಗೆ ಕಾನೂನು ಗೊತ್ತಿಲ್ಲ ಅಂದ ಮಾತ್ರಕ್ಕೆ, ಕಾನೂನು ಕ್ಷಮಿಸದು"? ಅಂದರೆ, ತಿಳಿದೋ ತಿಳಿಯದೆಯೋ ಕಾನೂನನ್ನು ಉಲ್ಲಂಘಿಸಿದರೆ, 'ನನಗೆ ಗೊತ್ತಿರಲಿಲ್ಲ' ಎಂಬ ಸಮರ್ಥನೆಯನ್ನು ಕಾನೂನು ಯಾವುದೇ ಕಾರಣಕ್ಕೂ ಸ್ವೀಕರಿಸುವುದಿಲ್ಲ.

ಶಾಸಕಾಂಗದ ಕರ್ತವ್ಯ ಶಾಸಕಾಂಗದವರು ಅಪರಾಧಗಳನ್ನು ನಿಯಂತ್ರಿಸಲು, ಪರಿಸರವನ್ನು ರಕ್ಷಿಸಲು, ಅರಣ್ಯವನ್ನು ಕಾಪಾಡಲು, ವನ್ಯಜೀವಿಗಳನ್ನು ರಕ್ಷಿಸಲು ಮತ್ತು ಆಡಳಿತದಲ್ಲಿ ಶುದ್ಧತೆಯನ್ನು ಕಾಪಾಡಲು ಪ್ರತಿವರ್ಷ ನೂರಾರು ಹೊಸ ಕಾನೂನುಗಳನ್ನು ರಚಿಸುತ್ತಿದ್ದಾರೆ.

ಮಾಹಿತಿ ತಲುಪಿಸುವ ಸಲಹೆ ಜನಸಾಮಾನ್ಯರಿಗೆ ಕಷ್ಟಕರವಾಗುವ ಕಾನೂನಿನ ಅಂಶಗಳನ್ನು ಕಥೆಗಳು, ಪ್ರಹಸನಗಳು ಮತ್ತು ಚುಟುಕುಗಳ ಮೂಲಕ ಸರಳವಾಗಿ ಜನರಿಗೆ ತಲುಪಿಸಿದಾಗ ಅದು ಹೆಚ್ಚು ಪರಿಣಾಮಕಾರಿ ಆಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಒಟ್ಟಾರೆಯಾಗಿ, ಕಾನೂನಿನ ಅಡಿಯಲ್ಲಿ ಪ್ರತಿಯೊಬ್ಬರೂ ಜವಾಬ್ದಾರಿಯುತವಾಗಿ ಬದುಕಬೇಕು. ಸಂವಿಧಾನ ಮತ್ತು ಕಾನೂನಿನ ಬಗ್ಗೆ ಅರಿವು ಇರುವುದು ಕಡ್ಡಾಯ. ಇಲ್ಲವಾದರೆ, ಕಾನೂನಿನ ಉಲ್ಲಂಘನೆಗೆ ಯಾವುದೇ ವಿನಾಯಿತಿ ಇರುವುದಿಲ್ಲ ಎಂಬುದನ್ನು ಮಾನ್ಯಾರು ಸ್ಪಷ್ಟಪಡಿಸಿದ್ದಾರೆ.

**ವರದಿ:ಆರತಿ.ಗಿಳಿಯಾರು.ಉಡುಪಿ**

# ಮಾರ್ಚ್ ಅಂತ್ಯಕ್ಕೆ ಗದಗ ವಾಡಿ ರೈಲ್ವೆ ಮೇಲ್ಸೇತುವೆ ಪೂರ್ಣ

**ಕುಷ್ಟಗಿ:** ಗದಗ ವಾಡಿ ರೈಲು ಮಾರ್ಗಕ್ಕೆ ಅಡ್ಡಲಾಗಿ ಕೊಪ್ಪಳ ಮಾರ್ಗದ ರಾಜ್ಯ ಹೆದ್ದಾರಿಯಲ್ಲಿ ನಿರ್ಮಾಗೊಳ್ಳುತ್ತಿರುವ ಮೇಲ್ಸೇತುವೆ ಕಾಮಗಾರಿ ಬರುವ ಮಾರ್ಚ್ ಅಂತ್ಯದ ವೇಳೆಗೆ ಪೂರ್ಣಗೊಳ್ಳಲಿದೆ ಎಂದು
ನೈಋತ್ಯ ರೇಲ್ವೆ ವಲಯದ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ಅಶೋಕ ಮುದಗೌಡರ ಹೇಳಿದರು.



ಮೇಲ್ಸೇತುವೆ ಸ್ಥಳದಲ್ಲಿ ಗುರುವಾರ ಕಾಮಗಾರಿ ಸ್ಥಿತಿಗತಿ ಪರಿಶೀಲಿಸಿ ಮಾಹಿತಿ ನೀಡಿದ ಅವರು, 'ಪಿಲ್ಲರ್‌ಗಳನ್ನು ಅಳವಡಿಸುವ ಕೆಲಸ ಪ್ರಗತಿಯಲ್ಲಿದ್ದು ತ್ವರಿತಗತಿಯಲ್ಲಿ ಹಾಗೂ ಗುಣಮಟ್ಟದ ವಿಷಯದಲ್ಲಿ ರಾಜಿ ಮಾಡಿಕೊಳ್ಳದೆ ಕಾಮಗಾರಿ ನಡೆಸುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ. ರೈಲ್ವೆ ಟ್ರ್ಯಾಕ್ ಮೇಲ್ಭಾಗದಲ್ಲಿ ಅಳವಡಿಸಬೇಕಿರುವ ವಿಶೇಷ ವಿನ್ಯಾಸಕ್ಕೆ ತಕ್ಕಂತೆ ಸ್ಟೀಲ್ ಬ್ರಿಡ್ಜ್ ಗರ್ಡರ್ ಸಿದ್ಧಪಡಿಸುವ ಕೆಲಸ ಚೆನ್ನೈನಲ್ಲಿ ನಡೆಯುತ್ತಿದೆ.
ನಿರೀಕ್ಷೆಯಂತೆ ಕೆಲಸ ಮುಂದುವರಿದರೆ ನಿಗದಿತ ಅವಧಿಯಲ್ಲಿ ರಾಜ್ಯ ಹೆದ್ದಾರಿ ಮೇಲ್ಸೇತುವೆ ಪೂರ್ಣಗೊಳ್ಳುತ್ತದೆ' ಎಂದರು.
ಕುಷ್ಟಗಿ ಭಾಗದಲ್ಲಿ 50 ಕೋಟಿ ವೆಚ್ಚದಲ್ಲಿ ಕಂದಕೂರು,
ರಾಷ್ಟ್ರೀಯ ಹೆದ್ದಾರಿ, ಸಿಂಧನೂರು ರಾಜ್ಯ ಹೆದ್ದಾರಿಗೆ ಅಡ್ಡಲಾಗಿ ಮತ್ತು ಹೆದ್ದಾರಿ ಪಕ್ಕದಲ್ಲಿನ ಶಾಲೆ ಬಳಿ ಸೇರಿ ಒಟ್ಟು 4 ಕೆಳಸೇತುವೆಗಳು ಹಾಗೂ ಕೊಪ್ಪಳ ರಾಜ್ಯ ಹೆದ್ದಾರಿಯಲ್ಲಿ ಒಂದು ಮೇಲ್ಸೇತುವೆ ಕಾಮಗಾರಿ ಪ್ಯಾಕೇಜ್‌ನಲ್ಲಿ ಸೇರಿವೆ. ಮೇಲ್ಸೇತುವೆ ನಿರ್ಮಾಣದ ನಂತರ ರಸ್ತೆ ಸಂಚಾರಕ್ಕೆ ಮುಕ್ತಗೊಳ್ಳಲಿದೆ.
ಕಾಮಗಾರಿ ನಡೆಯುವ ಸ್ಥಳದ ಪಕ್ಕದಲ್ಲಿನ ಜಮೀನನ್ನು ಬಾಡಿಗೆಗೆ ಪಡೆದು ರಾಜ್ಯ ಹೆದ್ದಾರಿಗೆ ತಾತ್ಕಾಲಿಕ ರಸ್ತೆ ನಿರ್ಮಿಸಿದ್ದು ಮೇಲ್ಸೇತುವೆ ಮುಗಿದ ನಂತರ ತಾತ್ಕಾಲಿಕ ರಸ್ತೆಯನ್ನು ತೆರವುಗೊಳಿಸುವುದಾಗಿ ಹೇಳಿದರು.
ತಾತ್ಕಾಲಿಕ ರಸ್ತೆಯಲ್ಲಿ ಅಳವಡಿಸಿರುವ ರಸ್ತೆಉಬ್ಬುಗಳು ಅವೈಜ್ಞಾನಿಕವಾಗಿದ್ದು ದ್ವಿಚಕ್ರ
ವಾಹನಗಳು ಸೇರಿದಂತೆ ಇತರೆ ವಾಹನಗಳ ಸಂಚಾರಕ್ಕೆ ತೊಂದರೆಯಾಗುತ್ತಿದೆ ಎಂಬ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿವೆ.
ಅವುಗಳನ್ನು ರ್‍ಯಾಂಪ್ ಮಾದರಿಯಲ್ಲಿ ಅಳವಡಿಸುವಂತೆ ಸ್ಥಳದಲ್ಲಿದ್ದ ಗುತ್ತಿಗೆದಾರರಿಗೆ ಅಶೋಕ ಮುದಗೌಡರ ಸೂಚಿಸಿದರು.

# ಮೊಬೈಲ್‌ನಲ್ಲಿ ಎಪಿಕೆ ಫೈಲ್
# 7.41 ಲಕ್ಷ ವಂಚನೆ

**ಕೊಪ್ಪಳ :** ವ್ಯಾಟ್ಸ್ ಆಯಪ್‌ನಲ್ಲಿ ಬಂದ ಆರ್‌ಟಿಒ ಇ ಚಲನ್1 ಹೆಸರಿನ ಎಪಿಕೆ ಫೈಲ್ ತಮ್ಮ ಮೊಬೈಲ್‌ನಲ್ಲಿ ಇನ್‌ಸ್ಟಾಲ್ ಮಾಡಿಕೊಂಡಿದ್ದನ್ನೇ ಬಂಡವಾಳ ಮಾಡಿಕೊಂಡ ವಂಚಕರು ತಾಲ್ಲೂಕಿನ ಕರ್ಕಿಹಳ್ಳಿ ಗ್ರಾಮದ ಉದ್ಯಮಿ ಅಮರೇಶಹೂಗಾರಅವರಿಗೆ7.41ಲಕ್ಷವಂಚಿಸಿದ್ದಾರೆ.
ಅಮರೇಶ್ ತಮ್ಮ ಮೊಬೈಲ್‌ಗೆ ಬಂದ ಎಪಿಕೆ ಫೈಲ್ ಇನ್‌ಸ್ಟಾಲ್ ಮಾಡಿಕೊಳ್ಳುತ್ತಿದ್ದಂತೆಯೇ



ಅವರ ಬ್ಯಾಂಕ್ ಖಾತೆಯಿಂದ ಹಣ ಕಡಿತವಾಗಲು ಆರಂಭವಾಗಲಿದೆ. ವಂಚಕರು ಮೊದಲು ?50 ಸಾವಿರ ಎಗರಿಸಿದ್ದಾರೆ.
ಹಂತಹಂತವಾಗಿ ಹಣವನ್ನು ವಂಚಕರು ತಮ್ಮ ವಿವಿಧ ಖಾತೆಗಳಿಗೆ ವರ್ಗಾವಣೆ ಮಾಡಿಕೊಂಡಿದ್ದಾರೆ. ವಂಚಕರನ್ನು ಪತ್ತೆ ಹಚ್ಚಿ ಕ್ರಮ ಕೈಗೊಳ್ಳುವಂತೆ ಅವರು ಇಲ್ಲಿನ ಸೈಬರ್ ಕ್ರೈಂ ಠಾಣೆಗೆ ದೂರು ನೀಡಿದ್ದು, ಎಫ್‌ಐಆರ್ ದಾಖಲಾಗಿದೆ.

# ದೇವಸ್ಥಾನಕ್ಕೆ ಬಂದಿದ್ದ ವೃದ್ಧೆ ಸಾವು

**ಮುನಿರಾಬಾದ್ :** ಹುಲಿಗಿಯ ಹುಲಿಗೆಮ್ಮದೇವಿ ದೇವಸ್ಥಾನಕ್ಕೆ ಶೀಗಿ ಹುಣ್ಣಿಮೆ ಅಂಗವಾಗಿ ಮಂಗಳವಾರ ಬಂದಿದ್ದ ವೃದ್ಧೆಯೊಬ್ಬರು ಅನಾರೋಗ್ಯದಿಂದ ಬುಧವಾರ ಮೃತಪಟ್ಟಿದ್ದಾರೆ.



ಮೃತರುಆಂಧ್ರಪ್ರದೇಶದಉರವಕೊಂಡ ಗ್ರಾಮದ ಜಾಲಮ್ಮ (60) ಎಂದು ಗುರುತಿಸಲಾಗಿದೆ. ಸ್ನಾನಕ್ಕೆಂದು ತುಂಗಭದ್ರಾ ನದಿಯ ಕಡೆಗೆ ಹೊರಟ ಜಾಲಮ್ಮ ಅವರು ಇದ್ದಕ್ಕಿದ್ದಂತೆ ಅಸ್ವಸ್ಥಗೊಂಡರು. ಅವರನ್ನು ಹೊಸಪೇಟೆಯ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ ಎಂದು ಅವರ ಸಂಬಂಧಿ ಮಲ್ಲಿಕಾರ್ಜುನ ಮಾಹಿತಿ ನೀಡಿದ್ದಾರೆ. ಹುಣ್ಣಿಮೆಯ ಅಂಗವಾಗಿ ಲಕ್ಷಾಂತರ ಜನರು ದೇವಸ್ಥಾನಕ್ಕೆ ಭೇಟಿ ನೀಡಿದ ಕಾರಣ ಸಂಚಾರ ದಟ್ಟಣೆ ಉಂಟಾಗಿ ಉಸಿರಾಡಲು ಕೂಡ ಕಷ್ಟವಾಗಿ ಹಲವು ಜನ ಅಸ್ವಸ್ಥಗೊಂಡು ಚಿಕಿತ್ಸೆ ಪಡೆದುಕೊಂಡ ಬಗ್ಗೆ ಮಾಹಿತಿ ಇದೆ.

# ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಜಾಥಾ

**ಕೊಪ್ಪಳ :** ಕಲ್ಯಾಣ ಕರ್ನಾಟಕದ ಸಮಗ್ರ ಹಾಗೂ ಪರಿಣಾಮಕಾರಿ ಅಭಿವೃದ್ಧಿಗಾಗಿ ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಜಾಥಾ ಹಮ್ಮಿಕೊಂಡಿದ್ದು, ಇದು ಕಲ್ಯಾಣ ಭಾಗದ ಎಲ್ಲ ಜಿಲ್ಲೆಗಳಲ್ಲಿಯೂ ಸಂಚರಿಸಲಿದೆ.
ವೆಲ್ಫೇರ್ ಪಾರ್ಟಿ ಆಫ್ ಇಂಡಿ-ಯಾದ ರಾಜ್ಯಾಧ್ಯಕ್ಷ ತಾಹೇರ್ ಹುಸೇನ್ ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ 'ಕಲ್ಯಾಣ ಕರ್ನಾಟಕದ ಪ್ರತಿ ಜಿಲ್ಲೆಯಲ್ಲಿಯೂ ವಿಭಿನ್ನವಾದ ಸಮಸ್ಯೆಗಳಿವೆ. ಜಾಥಾ ಮೂಲಕ ಎಲ್ಲ ಜಿಲ್ಲೆಗಳಿಗೆ ಭೇಟಿ ನೀಡಿ 371 ಜೆ ಅನುಷ್ಠಾನಕ್ಕೆ ಹೋರಾಡಿದ ಎಲ್ಲ ರಾಜಕೀಯ ಪಕ್ಷಗಳು, ಹೋರಾಟಗಾರರನ್ನು ಭೇಟಿಯಾಗಿ ಸಮಾಲೋಚನೆ ಮಾಡಲಾಗುತ್ತದೆ' ಎಂದು ತಿಳಿಸಿದರು.




ಈ ಭಾಗದಲ್ಲಿ ಮಾನವ ಅಭಿವೃದ್ಧಿ ಸೂಚಂಕ್ಯ ಹೆಚ್ಚಿಸಬೇಕು, ಜಿಲ್ಲಾ ಖನಿಜ ಪ್ರತಿಷ್ಠಾನ, ಕರ್ನಾಟಕ ಗಣಿ ಪರಿಸರದ ಪುನಶ್ಚೇತನ ಅಡಿ ಮತ್ತು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅನುದಾನ ಸಮರ್ಪಕವಾಗಿ ಬಳಕೆಯಾಗಬೇಕು, ಹೇರಳವಾಗಿರುವ ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತು ಕೊಡಬೇಕು.
ಸರ್ಕಾರಿ ಹುದ್ದೆಗಳನ್ನು ಭರ್ತಿ ಮಾಡಬೇಕು, ವಿಶೇಷ ಕೈಗಾರಿಕಾ ನೀತಿ ಜಾರಿ ಮಾಡಬೇಕು, ಬಾಕಿ ಇರುವ ನೀರಾವರಿ ಯೋಜನೆಗಳನ್ನು ಜಾರಿ ಮಾಡಬೇಕು.
ಅಲ್ಪಸಂಖ್ಯಾತರು, ಹಿಂದುಳಿದವರು ಹಾಗೂ ದಲಿತರ ಮೇಲೆ ನಡೆಯುತ್ತಿರುವ ಅನ್ಯಾಯದ ವಿಚಾರಣೆ ನಡೆಸಲು ಪ್ರತ್ಯೇಕ ನ್ಯಾಯಾಲಯ ರಚನೆಯಾಗಬೇಕು'
ಎನ್ನುವ ಬೇಡಿಕೆಗಳ ಈಡೇರಿ-ಕೆಗಾಗಿ ಜಾಥಾ ನಡೆಯುತ್ತಿದೆ ಎಂದು ಹೇಳಿದರು.

# ಕಳೆದಿದ್ದ ಬ್ಯಾಗ್ ಮರಳಿಸಿದ ಗೃಹರಕ್ಷಕ ದಳದ ಸಿಬ್ಬಂದಿ



**ರಾಣೆಬೆನ್ನೂರು :** ತಾಲ್ಲೂಕಿನ ದೇವರಗುಡ್ಡದ ಮಾಲತೇಶಸ್ವಾಮಿ ದೇವರ ದೇವಸ್ಥಾನದ ದರ್ಶನಕ್ಕೆ ಆಗಮಿಸಿದ್ದ ಭಕ್ತರೊಬ್ಬರು ಕಳೆದುಕೊಂಡಿದ್ದ ಬ್ಯಾಗ್ ಅನ್ನು ಗೃಹರಕ್ಷಕ ದಳದ ಸಿಬ್ಬಂದಿ ಪತ್ತೆ ಹಚ್ಚಿ, ವಾರಸುದಾರರಿಗೆ ಮರಳಿಸಿದ್ದಾರೆ.
ಶಿವಮೊಗ್ಗ ಜಿಲ್ಲೆಯ ಸಾಗರದ ಮೈಲಾರೆಪ್ಪ ಶೆಟ್ಟಿ ಎಂಬುವರು 10,000 ನಗದು,ಮೂರು ಮೊಬೈಲ್ ಫೋನ್‌ಗಳಿದ್ದ ಬ್ಯಾಗ್ ಅನ್ನು ಕಳೆದುಕೊಂಡಿದ್ದರು. ಈ ವಿಷಯವನ್ನು ಪ್ರವಾಸೋದ್ಯಮ ಇಲಾಖೆಯ ಪ್ರವಾಸಿ ಮಿತ್ರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಗೃಹರಕ್ಷಕ ದಳದ ಸಿಬ್ಬಂದಿ ಕೆ.ಎಚ್.ಕನ್ನಜ್ಜನವರ ಹಾಗೂ ಜಿ.ಎನ್. ಚೆನ್ನಾಪುರ ಅವರಿಗೆ ತಿಳಿಸಿದ್ದರು. ಸಿಬ್ಬಂದಿ ಬ್ಯಾಗ್ ಪತ್ತೆ ಹಚ್ಚಿ ಮಾಲೀಕರಿಗೆ ಹಸ್ತಾಂತರಿಸಿದರು. ಸಿಬ್ಬಂದಿಯ ಕರ್ತವ್ಯ ನಿಷ್ಠೆಗೆ ದೇವರಗುಡ್ಡ ಮಾಲತೇಶ ದೇವಸ್ಥಾನ ಕಮೀಟಿ ಪದಾಧಿಕಾರಿಗಳು ಹಾಗೂ ಪೊಲೀಸ್ ಇಲಾಖೆ ಪ್ರಶಂಸೆ ವ್ಯಕ್ತಪಡಿಸಿದೆ.

# ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸಭೆ

## ಸರ್ಕಾರದ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಬೇಕು: ಎನ್.ಎಚ್. ಕೋನರಡ್ಡಿ










**ಕೊಪ್ಪಳ :** ಸರ್ಕಾರದ ಎಲ್ಲಾ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಬೇಕು. ಸರಿಯಾಗಿ ಕರ್ತವ್ಯ ನಿರ್ವಹಿಸದ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಬೇಕಾಗುತ್ತದೆ ಎಂದು ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಹಾಗೂ ನವಲಗುಂದಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಎನ್.ಎಚ್. ಕೋನರಡ್ಡಿ ಹೇಳಿದರು.
ಅವರು ಗುರುವಾರ ಕೊಪ್ಪಳ ಜಿಲ್ಲಾ ಪಂಚಾಯತ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ವತಿಯಿಂದ ಹಮ್ಮಿಕೊಂಡಿದ್ದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದರು.
ರಾಜ್ಯದ ವಿವಿಧ ಜಿಲ್ಲೆಗಳಿಗೆ ನಾವು ಹೊರಟಿರುವ ಉದ್ದೇಶ ಆಯಾ ಜಿಲ್ಲೆಯ ಸಮಸ್ಯೆಗಳನ್ನು ತಿಳಿದುಕೊಳ್ಳುವುದಾಗಿದೆ. ಸರ್ಕಾರದ ಹಲವಾರು ಕಾರ್ಯಕ್ರಮಗಳು ಸರಿಯಾಗಿ ಅನುಷ್ಠಾನಗೊಳ್ಳದಿದ್ದರೆ ಏನು ಪ್ರಯೋಜನ. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಮಿಷನ್ ಇಂದ್ರ ಧನುಷ್, ಮಾತೃ ವಾತ್ಸಲ್ಯ ಯೋಜನೆ, ಮಕ್ಕಳ ರಕ್ಷಣಾ ಘಟಕ, ಬಾಲ ನ್ಯಾಯ ಮಂಡಳಿ, ಮಕ್ಕಳ ಕಲ್ಯಾಣ ಸಮಿತಿ, ದೇವದಾಸಿ ಮಕ್ಕಳಿಗೆ ಸಹಾಯ ಸೇರಿದಂತೆ ಇತರೆ ಹಲವಾರು ಯೋಜನೆಗಳ ಬಗ್ಗೆ ಸರಿಯಾಗಿ ತಿಳಿದುಕೊಂಡು ಅವುಗಳನ್ನು ಜಿಲ್ಲೆಯಲ್ಲಿ ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರಬೇಕೆಂದರು.
ಇವತ್ತು ಕೊಪ್ಪಳದಲ್ಲಿ ಸಭೆ ನಡೆಸಿದ್ದೇವೆ ನಾಳೆ ರಾಯಚೂರು ಜಿಲ್ಲೆಯಲ್ಲಿ ಸಭೆ ಮಾಡಲಿದ್ದೇವೆ. ಅಧಿಕಾರಿಗಳು ಸಭೆಗೆ ತಪ್ಪು ಮಾಹಿತಿ ನೀಡಭಾರದು. ಹಾಗೇನಾದರು ಮಾಡಿದರೆ ಅದಕ್ಕೆ ತಮ್ಮನೆ ಜವಾಬ್ದಾರರನ್ನಾಗಿ ಮಾಡಲಾಗುವುದು. ಕಳೆದ ಕೆಲವು ತಿಂಗಳ ಹಿಂದೆ ಯಾದಗಿರಿ ಜಿಲ್ಲೆಯಲ್ಲಿ 9ನೇ ತರಗತಿ ವಿದ್ಯಾರ್ಥಿನಿ ಮಗುವಿಗೆ ಜನ್ಮ ನೀಡಿ ಅದು ರಾಷ್ಟ್ರವ್ಯಾಪಿ ಸುದ್ದಿಯಾಗುವುದರ ಜೊತೆಗೆ ಸಮಾಜವೆ ತಲೆ ತಗ್ಗಿಸುವಂತಹ ಘಟನೆ ನಡೆಯಿತು. ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಪೋಕ್ಸೋ ಪ್ರಕರಣಗಳು ಎಷ್ಟಾಗಿವೆ ಮಾಹಿತಿ ನೀಡಿ ಅಂತಹ ಘಟನೆಗಳನ್ನು ಜಿಲ್ಲೆಯಲ್ಲಿ ನಡೆಯದಂತೆ ಎಚ್ಚರಿಕೆ ವಹಿಸಬೇಕೆಂದು ಹೇಳಿದರು.
ರಾಜ್ಯ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡುವುದರೊಂದಿಗೆ ವಿದ್ಯಾರ್ಥಿಗಳಿಗೆ ಮತ್ತು ಮಹಿಳೆಯರಿಗಾಗಿ ಇರುವ ಸರ್ಕಾರದ ಸೌಲಭ್ಯಗಳು ಹಾಗೂ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ಸರಿಯಾಗಿ ಅನುಷ್ಠಾನಗೊಳಿಸುವುದರ ಜೊತೆಗೆ ಅವುಗಳ ಬಗ್ಗೆ ಜಾಗೃತಿ ಮೂಡಿಸುವುದು ಈ ಸಮಿತಿಯ ಮುಖ್ಯ ಉದ್ದೇಶವಾಗಿದೆ. ಹೆಣ್ಣು ಮಕ್ಕಳ ರಕ್ಷಣೆ ಹಾಗೂ ಶಿಕ್ಷಣವನ್ನು ಉತ್ತೇಜಿಸಬೇಕು. ಮಹಿಳಾ ಮತ್ತು ಮಕ್ಕಳ ಅಭೀವೃದ್ಧಿ ಇಲಾಖೆಯ ಉಪನಿರ್ದೇಶಕರು, ಸಿಡಿಪಿಓ. ಗಳು ತಮ್ಮ ಹಂತದಲ್ಲಿ ಮಾತ್ರ ಕೆಲಸ ಮಾಡದೇ ಇತರೆ ಇಲಾಖೆಗಳೊಂದಿಗೆ ಸಮನ್ವಯತೆಯೊಂದಿಗೆ ಕೆಲಸ ಮಾಡಬೇಕು. ಈ ಭಾಗದ ಶೈಕ್ಷಣಿಕ ಅಭಿವೃದ್ಧಿಗಾಗಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಸಾಕಷ್ಟು ಅನುದಾನ ನೀಡಲಾಗುತ್ತಿದೆ. ಸಿ.ಎಸ್.ಆರ್ ಅನುದಾನದಡಿ ಗಣಿತ, ವಿಜ್ಞಾನ ಮತ್ತು ಇಂಗ್ಲೀಷ್ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅವಕಾಶವಿದ್ದು, ಅದನ್ನು ಬಳಕೆ ಮಾಡಿಕೊಂಡು ಜಿಲ್ಲೆಯ ಎಸ್.ಎಸ್. ಎಲ್.ಸಿ ಫಲಿತಾಂಶ ಸುಧಾರಣೆಗೆ ಕ್ರಮ ಕೈಗೊಳ್ಳಬೇಕು. ವಿಶೇಷವಾಗಿ ಜಿಲ್ಲೆಯಲ್ಲಿ ಯಾವುದೇ ರೀತಿಯ ಬಾಲ್ಯ ವಿವಾಹಗಳು ನಡೆಯದಂತೆ ನೋಡಿಕೊಂಡು ಎಲ್ಲಾ ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಈ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಪ್ರತಿ ತಿಂಗಳ ಮಾಸಿಕ ವರದಿ ಸಲ್ಲಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.
ವಿಧಾನಸಭಾ ಸದಸ್ಯರು ಹಾಗೂ ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಹೆಚ್.ಎ. ಇಕ್ಬಾಲ್ ಹುಸೇನ್ ಅವರು ಮಾತನಾಡಿ, ಕೊಪ್ಪಳ ಜಿಲ್ಲೆಯಲ್ಲಿ ಕಿಡ್ನಾಫ್, ರೇಫ್, ಮಿಸ್ಸಿಂಗ್, ಪೋಕ್ಸೋ ಪ್ರಕರಣಗಳ ಸಂಖ್ಯೆ ಹೆಚ್ಚಿನ ಸಂಖ್ಯೆಯಲ್ಲಿ ಕಂಡು ಬರುತ್ತಿರುವುದರಿಂದ ಇದರ ನಿಯಂತ್ರಣಕ್ಕೆ ಅಧಿಕಾರಿಗಳು ಕಡಿವಾಣ ಹಾಕಬೇಕಿದೆ. ರಾಜ್ಯಮಟ್ಟದ ಈ ಸಮಿತಿಯು ಜಿಲ್ಲೆಗೆ ಬರಲು ಕಾರಣ ಇಲ್ಲಿನ ತಳಮಟ್ಟದ ಸಮಸ್ಯೆಯನ್ನು ತಿಳಿದುಕೊಳ್ಳಲು ಬಂದಿದ್ದೇವೆ. ಖಾಸಗಿಯವರ ದತ್ತು ಮಕ್ಕಳ ಕೇಂದ್ರಗಳು ದುಡ್ಡು ಮಾಡುವ ಕೇಂದ್ರಗಳಾಗಿವೆ. ನಾವು ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಾಗ. ಅಪರಾಧ ಪ್ರಕರಣಗಳ ಸಂಖ್ಯೆ ಕಡಿಮೆಯಾಗಬೇಕು. ಎಲ್ಲರಿಗೂ ರಕ್ಷಣೆ ನೀಡುವ ಜವಾಬ್ದಾರಿ ನಮ್ಮ ಮೇಲಿದೆ. ನಮ್ಮ ಮಕ್ಕಳು ಮತ್ತು ಸಮಾಜವನ್ನು ನಾವು ಸ್ವಚ್ಛವಾಗಿಡುವ ಕೆಲಸ ಮಾಡಬೇಕಿದೆ ಎಂದರು.
ಅನ್ನಭಾಗ್ಯ ಯೋಜನೆಯು ಬಡಜನರಿಗೆ ತುಂಬಾ ಅನುಕೂಲವಾಗಿದ್ದು, ಅಂತ್ಯೋದಯ ಕಾರ್ಡ್‌ಗಳನ್ನು ಯಾವುದೇ ಕಾರಣಕ್ಕೆ ರದ್ದು ಮಾಡಬಾರದು. ಮತ್ತೆ ರೇಷನ್ ಕಾರ್ಡ್ ಮಾಡಿಸುವುದು ಸುಲಭದ ಕೆಲಸವಲ್ಲ. ಅರ್ಹ ಮಹಿಳಾ ಕಾರ್ಮಿಕರಿಗೆ ಲೇಬರ್ ಕಾರ್ಡ್ ಮಾಡಿಸಿ, ಅವರಿಗೆ ಸಿಗುವ ಸರ್ಕಾರದ ಯೋಜನೆಗಳ ಸೌಲಭ್ಯವನ್ನು ದೊರಕಿಸಿ ಕೊಡಬೇಕು. ಅಲ್ಪಸಂಖ್ಯಾತರ ಸಮುದಾಯದ ಬಡ ಜನರಿಗೆ ಸರಳ ವಿವಾಹಕ್ಕಾಗಿ ಸರ್ಕಾರದ ಪ್ರೋತ್ಸಾಹಧನವಿದ್ದು, ಈ ಬಗ್ಗೆ ಅರಿವು ಮೂಡಿಸಿ, ಮದುವೆಯಾಗುವ ಬಡ ಹೆಣ್ಣು ಮಕ್ಕಳಿಗೆ ಈ ಯೋಜನೆಯ ಲಾಭ ಸಿಗುವಂತಾಗಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.
ವಿಧಾನಸಭಾ ಸದಸ್ಯರು ಹಾಗೂ ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಶರ-ಣಗೌಡ ಕಂದಕೂರ ಅವರು ಮಾತನಾಡಿ, ನಮ್ಮ ಭಾಗದಲ್ಲಿ ಬಡತನ. ಬಾಲ್ಯವಿವಾಹ. ಮಕ್ಕಳ ಮಿಸ್ಸಿಂಗ್ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ಕಂಡು ಬರುತ್ತಿರುವುದರಿಂದ ಅದನ್ನು ಸರಿಪಡಿಸುವ ಕೆಲಸವನ್ನು ನಾವು ಮಾಡಬೇಕಿದೆ. ಮಹಿಳೆ ಮತ್ತು ಮಕ್ಕಳ ಮೇಲಿನ ದೌರ್ಜನ್ಯ. ರೇಫ್ ಕಿಡ್ನಾಫಗಳ ಸಂಖ್ಯೆ ಕಡಿಮೆಯಾಗಬೇಕಾದರೆ. ಸರಕಾರದ ವಿವಿಧ ಕಾರ್ಯಕ್ರಮಗಳ ಮೂಲಕ ಈ ಕುರಿತು ಜನರಲ್ಲಿ ಅರಿವು ಮೂಡಿಸು ಕಾರ್ಯಕ್ರಮಗಳನ್ನು ಸಂಬಂಧಿಸಿದ ಇಲಾಖೆಗಳ ಮೂಲಕ ಹಮ್ಮಿಕೊಳ್ಳಬೇಕಿದೆ. ಇಂತಹ ಪ್ರಕರಣ ನಡೆಯದಂತೆ ತಮ್ಮ ಸಲಹೆಗಳನ್ನು ನೀಡಿ. ಶಾಲಾ-ಕಾಲೇಜುಗಳಲ್ಲಿ ಈ ಕುರಿತು ಜಾಗೃತಿ ಮೂಡಿಸಬೇಕೆಂದು ಅಧಿಕಾರಿಗಳಿಗೆ ಹೇಳಿದರು.
ವಿಧಾನಸಭಾ ಸದಸ್ಯರು ಹಾಗೂ ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯರಾದ ಕರೆಮ್ಮ ನಾಯ್ಕ ಅವರು ಮಾತನಾಡಿ, ಒಬ್ಬ ಮಹಿಳೆ ಮನೆಯಲ್ಲಿದ್ದುಕೊಂಡು ದೂರು ನೀಡಿದರೂ, ಅವಳಿಗೆ ನ್ಯಾಯ ದೊರಕಿಸಿಕೊಡಬೇಕು. ಮಕ್ಕಳ ಮತ್ತು ಮಹಿಳೆಯರ ಹಕ್ಕುಗಳ ರಕ್ಷಣೆಯ ಜೊತೆಗೆ ಅವರ ಮೇಲಿನ ದೌರ್ಜನ್ಯ ಪ್ರಕರಣಗಳು ನಡೆಯದಂತೆ ನೋಡಿಕೊಳ್ಳಬೇಕು ಎಂದು ಹೇಳಿದರು.
ಕೊಪ್ಪಳ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಮಕ್ಕಳ ಕಾವಲು ಸಮಿತಿಗಳು ಕಾರ್ಯನಿರ್ವಹಿಸುತ್ತಿವೆ. ಅದೇ ರೀತಿ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿಯೂ ಮಕ್ಕಳ ಕಾವಲು ಸಮಿತಿಗಳ ರಚನೆಗಾಗಿ ಸಂಬಂಧಿಸಿದ ಇಲಾಖೆಗೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದ್ದು, ಇದಕ್ಕೆ ಅನುಮೋದನೆ ಸಿಕ್ಕ ನಂತರ ಜಿಲ್ಲೆಯ ನಗರ ಪ್ರದೇಶಗಳಲ್ಲಿಯೂ ಮಕ್ಕಳ ಕಾವಲು ಸಮಿತಿ ರಚಿಸಲಾಗುವುದು ಎಂದರು.
ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ಎನ್.ಎಚ್. ಕೋನರಡ್ಡಿ ಅವರು ಮಾತನಾಡಿ, ಕೊಪ್ಪಳ ಜಿಲ್ಲಾಧಿಕಾರಿಗಳು ಉತ್ತಮ ಸಲಹೆ ನೀಡಿದ್ದಾರೆ. ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿಯೂ ಮಕ್ಕಳ ಕಾವಲು ಸಮಿತಿಗಳ ರಚನೆಗೆ ಸರ್ಕಾರದಿಂದ ಅನುಮೊದನೆಗೆ ಕ್ರಮ ಕೈಗೊಳ್ಳಲಾಗುವುದು. ಅದರಂತೆ ರಾಜ್ಯಾದ್ಯಂತ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿಯೂ ಮಕ್ಕಳ ಕಾವಲು ಸಮಿತಿಗಳ ರಚನೆಗೆ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಗಳ ರಾಜ್ಯಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದರು.
**ಸನ್ಮಾನ:** ಕರ್ನಾಟಕ ವಿಧಾನಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಹಾಗೂ ಸದಸ್ಯರಿಗೆ ಜಿಲ್ಲಾಡಳಿತದ ಪರವಾಗಿ ಇದೇ ವೇಳೆ ಸನ್ಮಾನಿಸಲಾಯಿತು.
ಸಭೆಯಲ್ಲಿ ಪೋಲಿಸ್ ಮಹಾನಿರೀಕ್ಷಕರಾದ ಸತೀಶ್ ಕುಮಾರ್, ಬಳ್ಳಾರಿ ವಲಯದ ಪೊಲೀಸ್ ಮಹಾನಿರೀಕ್ಷಕರಾದ ವರ್ತಿಕ ಕಟಿಯಾರ್, ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್ ಅರಸಿದ್ಧಿ, ಶಾಲಾ ಶಿಕ್ಷಣ ಇಲಾಖೆ ಕಲಬುರಗಿ ವಿಭಾಗದ ಅಪರ ಆಯುಕ್ತರಾದ ಪಾಂಡ್ವೆ ರಾಹುಲ್ ತುಕಾರಾಮ್ ಹಾಗೂ ವಿಧಾನಸಭೆಯ ಅಧಿಕಾರಿಗಳು ಮತ್ತು ಕೊಪ್ಪಳ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ರಾಜ್ಯಮಟ್ಟದ ಅಧಿಕಾರಿಗಳು, ಕೊಪ್ಪಳ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಚಡಚಣ ಬ್ಯಾಂಕ್ ದರೋಡೆ ಪ್ರಕರಣ: ಪ್ರಮುಖ ಆರೋಪಿ ಸೆರೆ

## ಮಹಾರಾಷ್ಟ್ರ-ಬಿಹಾರದ ನಾಲ್ವರು ಪೊಲೀಸ್ ಬಲೆಗೆ; 9 ಕೆಜಿ ಚಿನ್ನಾಭರಣ, 86.31 ಲಕ್ಷ ರೂ. ನಗದು ಜಪ್ತಿ

**ವರದಿ: ಲಾಲಸಾಬ ಸವಾರಗೋಳ**

**ವಿಜಯಪುರ :** ಜಿಲ್ಲೆಯ ಚಡಚಣ ಪಟ್ಟಣದ ಎಸ್ಬಿಐ ಬ್ಯಾಂಕ್ ದರೋಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಾರಾಷ್ಟ್ರದ ಓರ್ವ ಪ್ರಮುಖ ಆರೋಪಿ ಹಾಗೂ ಅಕ್ರಮ ಪಿಸ್ತೂಲ್ ಪೂರೈಸಿದ್ದ ಬಿಹಾರದ ಮೂವರು ಸೇರಿದಂತೆ ನಾಲ್ವರನ್ನುಪೊಲೀಸರುಬಂಧಿಸಿದ್ದಾರೆ.ಅಲ್ಲದೆ, 9.01 ಕೆಜಿ ಚಿನ್ನಾಭರಣ ಮತ್ತು 86.31 ಲಕ್ಷ ರೂ. ನಗದು ಹಣವನ್ನೂ ಜಪ್ತಿ ಮಾಡಿದ್ದಾರೆ.

ಸೆ.16ರಂದು ಸಂಜೆ 7.20ರ ಸುಮಾರಿಗೆ ಚಡಚಣ ಪಟ್ಟಣದ ಎಸ್ಬಿಐ ಬ್ಯಾಂಕ್ ಶಾಖೆಯಲ್ಲಿ ಮೂರು ಜನ ಅಪರಿಚಿತ ವ್ಯಕ್ತಿಗಳು ಮಾಸ್ಕ್ ಧರಿಸಿಕೊಂಡು ಬ್ಯಾಂಕ್ ಖಾತೆ ತೆರೆಯುವ ನೆಪದಲ್ಲಿ ಪ್ರವೇಶಿಸಿದ್ದರು. ನಂತರ ಪಿಸ್ತೂಲ್ ಮತ್ತು ಚಾಕು ತೋರಿಸಿ ಬ್ಯಾಂಕ್ ಸಿಬ್ಬಂದಿಯನ್ನು ಕಟ್ಟಿಹಾಕಿ,

ಬ್ಯಾಂಕ್ನ ಸ್ಟ್ರಾಂಗ್ ರೂಮ್ನಲ್ಲಿದ್ದ ಸುಮಾರು 1.04 ಕೋಟಿ ರೂ. ನಗದು ಮತ್ತು 20








ಕೆಜಿ ಚಿನ್ನಾಭರಣಗಳನ್ನು ದೋಚಿ ಪರಾರಿಯಾಗಿದ್ದರು.

ಈ ಬಗ್ಗೆ ಬ್ಯಾಂಕ್ ವ್ಯವಸ್ಥಾಪಕ ತಾರಕೇಶ್ವರ ನೀಡಿದ ದೂರಿನ ಮೇರೆಗೆ ಚಡಚಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಈ ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ ಎಸ್ಪಿ ಲಕ್ಷ್ಮಣ ನಿಂಬರಗಿ, ಹೆಚ್ಚುವರಿ ಪೊಲೀಸ್ ನೇತೃತ್ವದಲ್ಲಿ ಏಳುವಿಶೇಷತನಿಖಾತಂಡಗಳನ್ನು ರಚಿಸಲಾಗಿತ್ತು.

ಇದೀಗ ಬ್ಯಾಂಕ್ ದರೋಡೆ ಸಂಚಿನಲ್ಲಿ ಪ್ರಮುಖ ಪಾತ್ರಧಾರಿಯಾದ ಮಹಾರಾಷ್ಟ್ರ ಮೂಲದ ಓರ್ವ ಆರೋಪಿಯನ್ನು ಬಂಧಿಸಲಾಗಿದೆ. ಹೆಚ್ಚಿನ ತನಿಖೆಯ ದೃಷ್ಟಿಯಿಂದ ಆರೋಪಿಯ ಹೆಸರನ್ನು ಪೊಲೀಸರು ಬಹಿರಂಗ ಪಡಿಸಿಲ್ಲ. ಅಲ್ಲದೆ,

ಆರೋಪಿಗಳಿಗೆ ಅಕ್ರಮ ಪಿಸ್ತೂಲ್ಗಳನ್ನು ಬಿಹಾರದಿಂದ ಪೂರೈಕೆಯಾಗಿರುವುದು ತಾಂತ್ರಿಕ ವಿಶ್ಲೇಷಣೆಯಲ್ಲಿ ಖಚಿತವಾಗಿದೆ. ಅಂತೆಯೇ, ಪೊಲೀಸರು ಬಿಹಾರಕ್ಕೆ ತೆರಳಿ, ಸಮಸ್ತಿಪುರಜಿಲ್ಲೆಯರಾಕೇಶಕುಮಾರಸಹಾನಿ, ರಾಜುಕುಮಾರ ಪಾಸ್ವಾನ, ರಕ್ಷಕಕುಮಾರ ಮಾತೊ ಎಂಬುವರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಪ್ರಕರಣದಲ್ಲಿ ಇನ್ನೂ ಇಬ್ಬರು ಆರೋಪಿಗಳು ತಲೆಮರೆಸಿಕೊಂಡಿದ್ದಾರೆ.

ಈಗಾಗಲೇ ಈ ಆರೋಪಿಗಳ ಸಹ ಗುರುತು ಪತ್ತೆಯಾಗಿದ್ದು, ದರೋಡೆ ಮಾಡಿದ್ದ ಇನ್ನುಳಿದ ಚಿನ್ನಾಭರಣ ಹಾಗೂ ನಗದು ಹಣ ವಶಪಡಿಸಿಕೊಳ್ಳುವ ಕಾರ್ಯವನ್ನು ಪೊಲೀಸರು ಕೈಗೊಂಡಿದ್ದಾರೆ.

# ಹಿಟ್ ಆ್ಯಂಡ್ ರನ್ ಪ್ರಕರಣ ಬೇಧಿಸಿದ ಪೋಲಿಸರು. ಮೂವರ ಬಂಧನ

## 24 ಗಂಟೆಯಲ್ಲಿ ಅಪಘಾತ ಪ್ರಕರಣ ಬೇಧಿಸಿದ ಪೊಲೀಸ ಇಲಾಖೆ !

**ಜಮಖಂಡಿ :** ಇತ್ತೀಚೆಗೆ ಗ್ರಾಮೀಣ ಠಾಣೆ ವ್ಯಾಪ್ತಿಯಲ್ಲಿ ನಡೆದ ರಸ್ತೆ ಅಪಘಾತ ಪ್ರಕರಣವನ್ನು ಬೇಧಿಸಿದ ಪೊಲೀಸರು, ಅದು ರಸ್ತೆ ಅಪಘಾತವಾಗಿರದೆ ಕೊಲೆ ಪ್ರಕರಣವೆಂದು ಸ್ಪಷ್ಟಪಡಿಸಿದ್ದಾರೆ.

ಬುಧವಾರ ಗ್ರಾಮೀಣ ಠಾಣೆ ವ್ಯಾಪ್ತಿಯ ಬಂಡಿಗಣಿ ಕ್ರಾಸದಲ್ಲಿ ರಸ್ತೆ ಅಪಘಾತ ನಡೆದಿತ್ತು. ಅಪಘಾತದಲ್ಲಿ ಯುಟ್ಯೂಬ್ ಪತ್ರಕರ್ತ ಬಸವರಾಜ ಖಾನಗೊಂಡ ಸ್ಥಳದಲ್ಲೇ ಮೃತಪಟ್ಟಿದ್ದನು. ಪ್ರಕರಣದ ಜಾಡು ಹಿಡಿದು ತನಿಖೆ ಕೈಗೊಂಡಿದ್ದ ಪೊಲೀಸರಿಗೆ ಅನುಮಾನ ಉಂಟಾಗಿ ಇದು ಕೊಲೆಪ್ರಕರಣವೆಂದುಗೊತ್ತಾಗಿದೆ. ಪ್ರಕರಣ ಸಂಬಂಧ ಮೂವರು ಆರೋಪಿಗಳನ್ನು ಬಂಧಿಸಿ ಕ್ರಮ ಜರುಗಿಸಿದ್ದಾರೆ. ಮೊದಲು ಹಿಟ್ ಆ?ಯಂಡ ರನ್ ಪ್ರಕರಣವೆಂದು ದಾಖಲಿಸಿಕೊಂಡಿದ್ದಪೊಲೀಸರು ಕೈಗೊಂಡ ತನಿಖೆಯ ಸಂದರ್ಭದಲ್ಲಿ ಅನುಮಾನ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ತನಿಖೆ ತ್ರೀವ್ರಗೊಳಿಸಿದಾಗ ಢಿಕ್ಕಿ ಹೊಡೆದ ವಾಹನ ಕೆ.ಎ. 48-ಂ-1732 ಎಂಬುದು ರಬಕವಿಯ ಭಾರಪೇಟ ಗಲ್ಲಿಯ ರಹವಾಸಿ ಅಶ್ಫಾಕ್ ಸುಲೇಮಾನ ಮುಲ್ಲಾ ಎಂಬುವನಿಗೆ ಸೇರಿದ್ದು ಎಂದು ಗೊತ್ತಾಗಿದೆ. ವಾಹನದ ಮಾಲಿಕ ಹಾಗೂ ಆತನ ಸಹಚರರಾದ ಹೊಸೂರು ನಿವಾಸಿಗಳಾದ ನಂದೀಶ್ವರ ಮಹಾದೇವ ಪವಾಡಿ ಮತ್ತು ಮಹೇಶ ಶ್ರೀಶೈಲ ಪವಾಡಿ ಎಂಬುವರನ್ನು ಕೂಡ ವಶಕ್ಕೆ ಪಡೆಯಲಾಗಿದೆ.

ವಿಚಾರಣೆಯ ಸಮಯದಲ್ಲಿ, ಅಶ್ಫಾಕ್ ಸುಲೇಮಾನ ಮುಲ್ಲಾ ಸ್ವಯಂಪ್ರೇರಿತಮತ್ತುವಿವರವಾದ ತಪ್ಪೊಪ್ಪಿಗೆಯನ್ನು ನೀಡಿದ್ದು, ಮಧುರಖಂಡಿ ಗ್ರಾಮದ ಬಳಿ ಬಸವರಾಜ ಖಾನಗೊಂಡ ಈತನ ಸ್ಕೂಟಿ ವಾಹನಕ್ಕೆ ಡಿಕ್ಕಿ ಹೊಡೆದು



ಉದ್ದೇಶ ಪೂರ್ವಕವಾಗಿ ಆತನ ಸಾವಿಗೆ ಕಾರಣವಾಗಿದ್ದಾಗಿ ಒಪ್ಪಿಕೊಂಡಿದ್ದಾನೆಂದು ಪೊಲೀಸರು ತಿಳಿಸಿದ್ದಾರೆ. ಅಶ್ಫಾಕ್ ಮುಲ್ಲಾ ಪಡಿತರ ಅಕ್ಕಿಯನ್ನು ಸಂಗ್ರಹಿಸಿ ಮಹಾರಾಷ್ಟ್ರಕ್ಕೆ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದ ಎನ್ನಲಾಗಿದ್ದು ಅವರನ್ನು ಬ್ಲಾಕಮೇಲ್ಮಾಡಿಹಣಕ್ಕೆಬೇಡಿಕೆ ಇಡುತ್ತಿದ್ದ ಯುಟ್ಯೂಬ್ ಪತ್ರಕರ್ತ ಕಳೆದ ನಾಲ್ಕು ವರ್ಷಗಳಿಂದ ಆತನಿಂದ ಸಾಕಷ್ಟು ಸಲ ಹಣ ಪಡೆದು ಸತಾಯಿಸುತ್ತಿದ್ದ ಎಂದು ಆರೋಪಿಗಳು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಇತ್ತೀಚೆಗೆ ಕೂಡ ಒಂದು ಲಕ್ಷ ರೂ. ಖಾನಗೊಂಡ ತನ್ನಿಂದ ಪಡೆದಿದ್ದಾಗಿ ಮುಲ್ಲಾ ಹೇಳಿದ್ದಾನಂತೆ.


**ಕೊಲೆಗೆ ಸ್ಕೆಚ್ :** ಹೆಚ್ಚಿನ ಹಣಕ್ಕೆ ಬೇಡಿಕೆ ಇಟ್ಟಿದ್ದ ಯೂಟ್ಯೂಬ್ ಪತ್ರಕರ್ತ ಬಸವರಾಜನನ್ನು ಭಗೀರಥ ಸರ್ಕಲ್ ನಲ್ಲಿನ ಸಣ್ಣ ಹೊಟೇಲಿನಲ್ಲಿ ಚರ್ಚೆಗೆಂದು ಕರೆಯಿಸಲಾಗಿತ್ತು. ಪರಿಚಯಸ್ಥರಾಗಿದ್ದ ರಾಘವೇಂದ್ರ ತೇಲಿ ಎಂಬುವರ ಮಧ್ಯಸ್ಥಿಕೆಯಲ್ಲಿ ಸಭೆ ನಡೆಸಿ ಚರ್ಚೆ ಮುಗಿಸಿಕೊಂಡು ಅಶ್ಫಾಕ್ ಸ್ಥಳದಿಂದ ಹೊರಟು ಹೋಗಿದ್ದ. ಉಳಿದವರು ಅಲ್ಲಿಯೆ ಊಟಕ್ಕೆ ಕುಳಿತರು ಎನ್ನಲಾಗಿದೆ. ಊಟ ಮುಗಿಸಿ ಅಲ್ಲಿಂದ ಬಸವರಾಜ ತನ್ನ ಸ್ಕೂಟಿ ವಾಹನದಲ್ಲಿ ಜಮಖಂಡಿಯತ್ತ ಪ್ರಯಾಣ ಬೆಳೆಸಿದ್ದ. ಅಶ್ಫಾಕನ ಸಹಚರರಾದ ನಂದೀಶ್ವರ ಹಾಗೂ ಮಹೇಶ ಬಸವರಾಜನನ್ನು ಹಿಂಬಾಲಿಸುತ್ತ ಬಂಡಿಗಣಿ ಕ್ರಾಸ್ ಹತ್ತಿರ ಪಿಕಪ್ ವಾಹನದೊಂದಿಗೆ ಕಾಯುತ್ತಿದ್ದ ಅಶ್ಫಾಕ್ ನೊಂದಿಗೆ ಮೊಬೈಲ್ ಮೂಲಕ ನಿರಂತರ ಮಾಹಿತಿ ನೀಡುತ್ತಿದ್ದರು. ಪೂರ್ವ ನಿಯೋಜನೆಯಂತೆಹತ್ತಿರಕ್ಕೆಬಂದ ಬಸವರಾಜನ ವಾಹನಕ್ಕೆ ರಾಂಗ್ ಸೈಡದಲ್ಲಿ ವೇಗವಾಗಿ ಬಂದು ಡಿಕ್ಕಿ ಹೊಡೆದು ಅಪಘಾತ ಎಂಬಂತೆ ಸೃಷ್ಟಿಸಲಾಗಿತ್ತು. ಯುಸುಫ ಮುಲ್ಲಾನ ಸಹಾಯದಿಂದ ಪಿಕಪ್ ವಾಹನವನ್ನು ಮುಚ್ಚಿಡಲಾಗಿತ್ತು.

ಸಿಸಿಟಿವಿ ದೃಶ್ಯಾವಳಿಗಳು, ಡಿಜಿಟಲ್ ಪುರಾವೆಗಳು, ಸಾಕ್ಷಿಗಳ ಹೇಳಿಕೆಗಳು ಮತ್ತು ವಿಧಿ ವಿಜ್ಞಾನ ಸುಳಿವುಗಳಿಂದ ದೃಢೀಕರಿಸಲ್ಪಟ್ಟ ತಪ್ಪೊಪ್ಪಿಗೆ ಆಧಾರದ ಮೇಲೆ, ಪ್ರಕರಣವನ್ನು ರಸ್ತೆ ಅಪಘಾತದಿಂದ ಕೊಲೆ ಪ್ರಕರಣವಾಗಿ ಪರಿವರ್ತಿಸಲಾಗಿದೆ ಎಂದು ಪೊಲೀಸ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಕರಣಕ್ಕೆ ಸಂಬಂಧಪಟ್ಟಂತೆ ಮೂವರು ಆರೋಪಿಗಳಾದ ರಬಕವಿಯ ಅಶ್ಫಾಕ ಮುಲ್ಲಾ, ಹೊಸೂರಿನ ನಂದೀಶ್ವರ ಪವಾಡಿ ಮತ್ತು ಮಹೇಶ ಪವಾಡಿ ಎಂಬುವರನ್ನು ಬಂಧಿಸಲಾಗಿದೆ. ಅಪರಾಧದಲ್ಲಿ ಬಳಸಲಾದ ವಾಹನವನ್ನು ವಶಪಡಿಸಿಕೊಳ್ಳಲಾಗಿದ್ದು ತನಿಖೆ ಮುಂದುವರೆದಿದೆ.

ಒಟ್ಟಿನಲ್ಲಿ ದೋನ್ ನಂಬರ್ ದಂಧೆ ಮಾಡುವವರಿಂದ ಹಣ ಪೀಕುವ ಯೂಟ್ಯೂಬ್ ಪತ್ರಕರ್ತರಿಗೆ, ನಕಲಿ ಪತ್ರಕರ್ತರಿಗೆ ಇದೊಂದು ಎಚ್ಚರಿಕೆಯ ಗಂಟೆಯಾಗಿದೆ ಎಂದು ಹೇಳಬಹುದು.

## ಭಿಕ್ಷುಕಿ ನೀಡಿದ 1.83 ಲಕ್ಷ ರೂ. ದೇಣಿಗೆ



**ರಾಯಚೂರು:** ವೃದ್ಧ ಭಿಕ್ಷುಕಿಯೊಬ್ಬರು ಆಂಜನೇಯ ದೇವಸ್ಥಾನ ನಿರ್ಮಾಣಕ್ಕೆ 1.83 ಲಕ್ಷ ರೂ. ದೇಣಿಗೆ ನೀಡಿದ ಅಪರೂಪದ ಘಟನೆ ರಾಯಚೂರು ತಾಲೂಕಿನ ಬಿಜನಗರ ಗ್ರಾಮದಲ್ಲಿ ನಡೆದಿದ್ದು, ಜನರನ್ನು ಅಚ್ಚರಿಗೊಳಿಸಿದೆ.ದಾನಮಾಡಲುಶ್ರೀಮಂತನಾಗಿರಬೇಕಾಗಿಲ್ಲ.ಭಿಕ್ಷುಕನಿಗೆ ಹೃದಯ ಶ್ರೀಮಂತಿಕೆ ಇದ್ದರೆ ಅವನು ಲಕ್ಷ ಲಕ್ಷ ರೂಪಾಯಿಗಳನ್ನು ಸಹ ದೇಣಿಗೆ ನೀಡಬಹುದು. ಅದೇ ರೀತಿ, ರಂಗಮ್ಮ ಎಂಬ 60 ವರ್ಷದ ಮಹಿಳೆ ಭಿಕ್ಷಾಟನೆಯಿಂದ ಬಂದ ಹಣದಿಂದ ಲಕ್ಷ ರೂಪಾಯಿಗಳನ್ನು ದೇಣಿಗೆ ನೀಡಿದ್ದಾರೆ.

ಸುಮಾರು 30 ವರ್ಷಗಳ ಹಿಂದೆ ಆಂಧ್ರಪ್ರದೇಶದಿಂದ ಬಂದು ಬಿಜನಗರ ಗ್ರಾಮದಲ್ಲಿ ಒಂಟಿಯಾಗಿ ವಾಸಿಸುತ್ತಿದ್ದ ರಂಗಮ್ಮ,ಭಿಕ್ಷುಕಿಯಾಗಿದ್ದಾರೆ. ಯಾರೊಂದಿಗೂ ಮಾತನಾಡದ ಈ ವೃದ್ಧೆಯನ್ನು ಗ್ರಾಮಸ್ಥರು ಆಕಸ್ಮಿಕವಾಗಿ ಗಮನಿಸಿದ್ದಾರೆ.ಡಬ್ಬಿ, ಗಂಟುಗಳಲ್ಲಿ ಕೂಡಿಟ್ಟಿದ್ದ ಹಣ ಆಕಸ್ಮಿಕವಾಗಿ ಗ್ರಾಮಸ್ಥರ ಕಣ್ಣಿಗೆ ಬಿದ್ದಿದೆ.

ಗ್ರಾಮಸ್ಥರು ಹಣವನ್ನು ಎಣಿಸಿ ಕೊಟ್ಟಿದ್ದಾರೆ.ವೃದ್ಧೆಯನ್ನು ಹಣ ಏನು ಮಾಡುತ್ತೀರಿ ಎಂದು ಕೇಳಿದ್ದಾರೆ. ಅದಕ್ಕೆ ಅವರು ದೇವಾಲಯ ನಿರ್ಮಾಣಕ್ಕಾಗಿ ಅದನ್ನು ದಾನ ಮಾಡುವುದಾಗಿ ಹೇಳಿದ್ದಾರೆ.

# ಭಾರಿ ದರೋಡೆಗೊಳಗಾಗಿದ್ದ ಮನಗೂಳಿ ಕೆನರಾ ಬ್ಯಾಂಕ್‌ಗೆ ಎಡಿಜಿಪಿ ಹಿತೇಂದ್ರ ಭೇಟಿ

**ಬಸವನಬಾಗೇವಾಡಿ :** ರಾಜ್ಯ ಪೊಲೀಸ್ ಇಲಾಖೆಯ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಎಡಿಜಿಪಿ ಆರ್.ಹಿತೇಂದ್ರಅವರು ವಿಜಯಪುರ ಜಿಲ್ಲೆ ಪ್ರವಾಸ ಕೈಗೊಂಡು ವೇಳೆ ಬುಧವಾರ ಸಂಜೆ ತಾಲ್ಲೂಕಿನ ಮನಗೂಳಿ ಪಟ್ಟಣಕ್ಕೆ ಭೇಟಿ ನೀಡಿದರು.



ಈ ಸಂದರ್ಭದಲ್ಲಿ ಮನಗೂಳಿ ಪೊಲೀಸ್ ಠಾಣೆಗೆ ಹಾಗೂ ಇತ್ತಿಚೆಗೆ ಕಳ್ಳತನವಾಗಿದ್ದ ಮನಗೂಳಿ ಕೆನರಾ ಬ್ಯಾಂಕ್‌ಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಬ್ಯಾಂಕ್ ಅಧಿಕಾರಿಗಳಿಗೆ,ಸಿಬ್ಬಂದಿಗೆ ಸೂಕ್ತ ಸಲಹೆ ಸೂಚನೆಗಳನ್ನು ನೀಡಿದರು.

ಈ ವೇಳೆ ಬೆಳಗಾವಿ ವಲಯ ಐಜಿಪಿ ಡಾ. ಚೇತನಸಿಂಗ್ ರಾಥೋಡ್,

ಎಸ್ಪಿ ಲಕ್ಷ್ಮಣ ನಿಂಬರಗಿ,

ಅಡಿಷನಲ್ ಎಸ್ಪಿ ರಾಮನಗೌಡ ಹಟ್ಟಿ, ಡಿವೈಎಸ್ಪಿ ಟಿ.ಎಸ್.ಸುಲ್ಫಿ, ಸಿಪಿಐ ರಮೇಶ ಅವಜಿ ಹಾಜರಿದ್ದರು.

# ಅಂಚೆ ಸೇವೆ ಜನರ ಜೀವನದ ಅವಿಭಾಜ್ಯ ಅಂಗ:ಸಂತೋಷ ಬಂಡೆ

**ಇಂಡಿ:** ಇಂಟರ್ನೆಟ್ -ದೂರಸಂಪರ್ಕದ ಆವಿಷ್ಕಾರಕ್ಕಿಂತ ಮುಂಚೆ, ಜನರ ಸಂವಹನಕ್ಕಾಗಿ ಅಂಚೆ ಸೇವೆ ಮುಖ್ಯವಾಗಿತ್ತು. ಶತಮಾನಗಳಿಂದ ದಕ್ಷ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಚೆ ವ್ಯವಸ್ಥೆಯು ಪ್ರಪಂಚದಾದ್ಯಂತ ಮಾಹಿತಿಯನ್ನು ರವಾನಿಸುವ ಅತ್ಯಂತ ವಿಶ್ವಾಸಾರ್ಹ ಸಾಧನವಾಗಿದೆ ಎಂದು ಶಿಕ್ಷಕ ಸಂತೋಷ ಬಂಡೆ ಹೇಳಿದರು.



ಗುರುವಾರದಂದು ತಾಲೂಕಿನ ಹಿರೇರೂಗಿ ಗ್ರಾಮದ ಅರಿವು ಕೇಂದ್ರದಲ್ಲಿ ಹಮ್ಮಿಕೊಂಡ 'ವಿಶ್ವ ಅಂಚೆ ದಿನ'ವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜನರ ಜೀವನದ ಅವಿಭಾಜ್ಯ ಅಂಗವಾಗಿದ್ದ ಅಂಚೆ ಇಲಾಖೆ ಈಗ ತನ್ನ ಅಸ್ತಿತ್ವವನ್ನು ಉಳಿಸಿಕೊಳ್ಳುತ್ತಾ, ಹಣದ ವರ್ಗಾವಣೆ, ವಿಮಾ, ಉಳಿತಾಯ ಯೋಜನೆಗಳ ಮೂಲಕ ಜನರ ಆರ್ಥಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಮೂಲಕ ಗ್ರಾಮೀಣರ ಬದುಕಿಗೆ ಆಸರೆಯಾಗಿದೆ ಎಂದು ಹೇಳಿದರು.

ಶಿಕ್ಷಕರವಿಗಿಣ್ಣಿಮಾತನಾಡಿ,ಜನರದೈನಂದಿನ ಜೀವನದಲ್ಲಿ ಅಂಚೆ ಸೇವೆಗಳ ಪಾತ್ರದ ಬಗ್ಗೆ ಜಾಗೃತಿ ಮೂಡಿಸಲು, ಜಾಗತಿಕ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಅಂಚೆಗಳ ಕೊಡುಗೆಯನ್ನು ಗುರ್ತಿಸಲು ಪ್ರತಿವರ್ಷ ಅಕ್ಟೋಬರ್ 9 ರಂದು ವಿಶ್ವ ಅಂಚೆ ದಿನವನ್ನು ಆಚರಿಸಲಾಗುತ್ತಿದೆ ಎಂದು ಹೇಳಿದರು.

ಶಾಖಾ ಅಂಚೆಪಾಲಕ ಸೋಮನಗೌಡ ಬಿರಾದಾರ

ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದು ಅಂಚೆ ಕಚೇರಿಗಳು ಬರೀ ಪತ್ರ ವ್ಯವಹಾರ, ತಂತಿ ಸಂದೇಶಗಳಿಗಷ್ಟೆ ಮೀಸಲಾಗದೇ ಜನತೆಗೆ ಒಂದೇ ಸೂರಿನಡಿ ಎಲ್ಲ ಬ್ಯಾಂಕಿಂಗ್ ಸೌಲಭ್ಯ ಕಲ್ಪಿಸುವ ಕಚೇರಿಗಳಾಗುತ್ತಿವೆ. ಎಲ್ಲರೂ ಅಂಚೆಸೇವೆಗಳ ಸದುಪಯೋಗ ಮಾಡಿಕೊಳ್ಳಬೇಕು ಎಂದು ಹೇಳಿದರು.

ಯುವ ಧುರೀಣ ಪರಶುರಾಮ ಹೊಸಮನಿ ಜ್ಯೋತಿ ಬೆಳಗಿಸಿದರು.

ಗ್ರಾಮದ ಶ್ರೀಶೈಲ ಗುನ್ನಾಪುರ, ಶಿಕ್ಷಕ ಎಸ್ ಆರ್ ಚಾಳೇಕರ, ಶಾಂತಪ್ಪ ಕಪ್ಪಿ, ಅಕ್ಬರ ಕೋರಬು, ಮಲ್ಲಮ್ಮ ಚವ್ಹಾಣ, ಸಂಗೀತಾ ಮಠಪತಿ, ಗ್ರಂಥಪಾಲಕ ಸಚೀನ ಹೊಸೂರು, ನಿಂಗಪ್ಪ ಡಂಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಶಾಖಾ ಅಂಚೆ ಪಾಲಕ ಸೋಮನಗೌಡ ಬಿರಾದಾರ, ಶಾಖಾ ಅಂಚೆ ಉಪಪಾಲಕ ಯಶವಂತ ಬಿರಾದಾರ ಅವರನ್ನು ಸನ್ಮಾನಿಸಲಾಯಿತು.

# ಹುಲಜಂತಿ ಶ್ರೀ ಮಾಳಿಂಗರಾಯ ಜಾತ್ರೆಗೆ ವಿಶೇಷ ಸಾರಿಗೆ ವ್ಯವಸ್ಥೆ

**ವಿಜಯಪುರ :** ಮಹಾರಾಷ್ಟ್ರತ್ ಜತ್ ತಾಲೂಕಿನ ಹುಲಜಂತಿ ಗ್ರಾಮದಲ್ಲಿ ಅಕ್ಟೋಬರ್ 17 ರಿಂದ 23ರವರೆಗೆ ಜರುಗುವ ಶ್ರೀ ಮಾಳಿಂಗರಾಯ ದೇವರ ಜಾತ್ರೆ ಅಂಗವಾಗಿ ಯಾತ್ರಾರ್ಥಿಗಳ ಅನುಕೂಲಕ್ಕಾಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಜಯಪುರ ವಿಭಾಗದಿಂದ ವಿಶೇಷ ಸಾರಿಗೆ ಕಾರ್ಯಾಚರಣೆ ಕೈಗೊಳ್ಳಲಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಸಾರ್ವಜನಿಕರಿಗೆ ಉತ್ತಮ ಸಾರಿಗೆ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ ವಿಜಯಪುರ ವಿಭಾಗದ ವಿಜಯಪುರ, ಇಂಡಿ,ಚಡಚಣ,ಸಿಂದಗಿ,ಮುದ್ದೇಬಿಹಾಳ,ತಾಳಿಕೋಟೆ ಹಾಗೂ ಬಸವನಬಾಗೇವಾಡಿ ಬಸ್ ನಿಲ್ದಾಣದಿಂದ ಹೆಚ್ಚುವರಿ ವಿಶೇಷ ಬಸ್ ಕಾರ್ಯಾಚರಣೆ ಮಾಡಲಾಗುವುದು.

ಪ್ರಯಾಣಿಕರು ಸಾರಿಗೆ ಸೌಲಭ್ಯಕ್ಕಾಗಿ ಹಾಗೂ ಈ ಕುರಿತಂತೆ ಹೆಚ್ಚಿನ ಮಾಹಿತಿಗಾಗಿ ಘಟಕ ವ್ಯವಸ್ಥಾಪಕರು

ವಿಜಯಪುರ-1: ಮೊ: 7760992263, ವಿಜಯಪುರ-2 ಮೊ: 7760992264, ಇಂಡಿ ಮೊ: 7760992265, ಸಿಂದಗಿ ಮೊ: 7760992266, ಮುದ್ದೇಬಿಹಾಳ ಮೊ: 7760992267, ತಾಳಿಕೋಟ ಮೊ: 7760992268,

ಬಸವನ ಬಾಗೇವಾಡಿ ಮೊ: 7760992269, ಕೇಂದ್ರ ಬಸ್ ನಿಲ್ದಾಣ ವಿಜಯಪುರ ದೂ: 08352-251344 ಹಾಗೂ ಮೊ: 7760992258 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ನಾರಾಯಣಪ್ಪ ಕುರುಬರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನರೇಗಾದ ಎನ್‌ಎಂಎಂಎಸ್ ತಂತ್ರಾಂಶದಲ್ಲಿ ಕಡ್ಡಾಯವಾಗಿ ಇ-ಕೆವೈಸಿ ಮಾಡಿಸಿ: ಜಿಪಂ ಸಿಇಓ ರಿಷಿ ಆನಂದ

**ವಿಜಯಪುರ :** ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನೋಂದಾಯಿತ ಕುಟುಂಬಗಳ ಜಾಬ್ ಕಾರ್ಡ್ ಮಾನ್ಯತಾ ಅವಧಿಯ ಇ-ಕೆವೈಸಿ ಮುಖಾಂತರ ಪೂರ್ಣಗೊಳಿಸಲಾಗುತ್ತಿದ್ದು,

ಎಲ್ಲ ನರೇಗಾ ಕೂಲಿಕಾರ್ಮಿಕರು ಈ ಅಭಿಯಾನದಲ್ಲಿ ಪಾಲ್ಗೊಂಡು ಕಡ್ಡಾಯವಾಗಿ ಇ-ಕೆವೈಸಿ ಪೂರ್ಣಗೊಳಿಸಲು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಮನವಿ ಮಾಡಿದ್ದಾರೆ.

ಕೇಂದ್ರಗ್ರಾಮೀಣಾಭಿವೃದ್ಧಿ ಮಂತ್ರಾಲಯದ ಆದೇಶ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳ ಸೂಚನೆಯಂತೆ ಜಿಲ್ಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಸಕ್ರಿಯ ಕೂಲಿಕಾರರ ಜಾಬ್ಕಾರ್ಡ್‌ಅನ್ನು ಇ-ಕೆವೈಸಿ ಮುಖಾಂತರ ಮೌಲ್ಯೀಕರಿಸಲಾಗುತ್ತಿದ್ದು,

ನರೇಗಾ ಯೋಜನೆಯಡಿ ಎಲ್ಲಾ ಗ್ರಾಮಪಂಚಾಯತಿಗಳ ಸಕ್ರಿಯ ಕುಟುಂಬಗಳ ಜಾಬ್ ಕಾರ್ಡ್ ಮಾನ್ಯತಾ ಅಭಿಯಾನದ ಮಾದರಿಯಲ್ಲಿ ಅತೀ ತುರ್ತಾಗಿ ಇ-ಕೆವೈಸಿ ಮುಖಾಂತರ ಪೂರ್ಣಗೊಳಿಸಲು ಅಗತ್ಯ ತರಬೇತಿಯನ್ನು ಸಿಬ್ಬಂದಿಗಳಿಗೆ ನೀಡಲಾಗಿದೆ. ಎಲ್ಲಾ ಸಿಬ್ಬಂದಿಗಳು ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಿ ಇ-ಕೆವೈಸಿ ಪ್ರಕ್ರಿಯೆಗೆ ಅಣಿಯಾಗಿದ್ದಾರೆ. ಇ-ಕೆವೈಸಿ ಪ್ರಕ್ರಯೆ ಕೂಲಿಕಾರ್ಮಿಕರು ಪಾಲ್ಗೊಳ್ಳಬೇಕು ಮುಂದಿನ ದಿನಗಳಲ್ಲಿ ಇ-ಕೆವೈಸಿ ಮಾಡಿಕೊಳ್ಳದ ಜಾಬ್-ಕಾರ್ಡ್ಗಳು ನಿಷ್ಕ್ರೀಯವಾಗುತ್ತವೆ.

ನರೇಗಾ ಯೋಜನೆಯಡಿ ನೋಂದಾಯಿತ ಕೂಲಿಕಾರ್ಮಿಕರ ಸಕ್ರಿಯ ಮಾಹಿತಿಯನ್ನು ಎನ್‌ಎಂಎಂಎಸ್ ಮೊಬೈಲ್ ತಂತ್ರಾಂಶದಲ್ಲಿ ಇ-ಕೆವೈಸಿ ಮಾಡುವ ಬಗ್ಗೆ ಈಗಾಗಲೇ ಎಲ್ಲ ಗ್ರಾಮ ಪಂಚಾಯಿತಿ, ಗ್ರಾಮ ಮಟ್ಟದಲ್ಲಿ ಜನರಿಗೆ ಅರಿವು ಮೂಡಿಸಲಾಗುತ್ತಿದೆ. ಈ ಅಭಿಯಾನದ ಕುರಿತು ಧ್ವನಿ ಮುದ್ರಿಕೆಯನ್ನು ಗ್ರಾಪಂನ ಕಸ ಸಂಗ್ರಹಿಸುವ ವಾಹನಗಳ ಮೂಲಕ ಪ್ರಸಾರ ಮಾಡಲಾಗುತ್ತಿದೆ. ಎನ್‌ಎಂಎಂಎಸ್ ಇ-ಕೆವೈಸಿ ಕಾಲೋಚಿತಗೊಳಿಸಿಕೊಳ್ಳಲು ಗ್ರಾಪಂ ಮಟ್ಟದ ಸಿಬ್ಬಂದಿಗೆ ತರಬೇತಿ ನೀಡಲಾಗಿದೆ.

ಆದರೆ,ಕೆಲಗ್ರಾಮದಲ್ಲಿನರೇಗಾಕೂಲಿಕಾರರು ವೈಯಕ್ತಿಕ ಕೆಲಸಕ್ಕಾಗಿ ಮನೆಯಲ್ಲಿ ಇರದೇ ಬೇರೆಡೆ ಹೋದಾಗ ಮನೆ-ಮನೆ ಭೇಟಿ ನೀಡಿದ ಸಂದರ್ಭದಲ್ಲಿ ನರೇಗಾ ಸಿಬ್ಬಂದಿಗೆ ಅಲಭ್ಯವಾದಾಗ ಇ-ಕೆವೈಸಿ ಪ್ರಕ್ರಿಯೆ ನಿಧಾನಗತಿಯಲ್ಲಿ ಸಾಗುತ್ತಿದೆ. ಮುಂದಿನ ದಿನಗಳಲ್ಲಿ ನರೇಗಾ ಕೂಲಿಕಾರರಿಗೆ ಕೆಲಸ ನೀಡುವ ಸಂದರ್ಭದಲ್ಲಿ ಸಮಸ್ಯೆಯಾಗುವ ಸಾಧ್ಯತೆ ಇದೆ.

ಈ ಹಿನ್ನೆಲೆಯಲ್ಲಿ ಎಲ್ಲ ನರೇಗಾ ಕೂಲಿಕಾರರ ಆದಷ್ಟು ಬೇಗ ಕಡ್ಡಾಯವಾಗಿ ಇ-ಕೆವೈಸಿ ಮಾಡಿಕೊಳ್ಳಬೇಕು.

ನರೇಗಾ

ಯೋಜನೆಯ ಪಾರದರ್ಶಕ ಅನುಷ್ಠಾನಕ್ಕೆ ಮತ್ತೊಂದು ಹೆಜ್ಜೆ ಇ-ಕೆವೈಸಿ ಆಗಿದ್ದು, ನರೇಗಾಕೂಲಿಕಾರರು,ಕಾಯಕಬಂಧುಗಳು ಇ-ಕೆವೈಸಿ ಅಪ್ಡೇಟ್ ಮಾಡಿಸಿಕೊಳ್ಳುವುದು ಕಡ್ಡಾಯವಾಗಿದೆ.

ನಮ್ಮ ಜಿಲ್ಲೆಯಲ್ಲಿ 2,22,756 ಜನ ಸಕ್ರಿಯ ಕೂಲಿಕಾರ್ಮಿಕರಿದ್ದು, ಎಲ್ಲರೂ ಸಹ ಇ-ಕೆವೈಸಿ ಅಪ್ಡೇಟ್ ಮಾಡಿಕೊಳ್ಳಲು ತಿಳಿಸಿ, ಹೆಚ್ಚಿನ ಮಾಹಿತಿಗಾಗಿ ಆಯಾ ಗ್ರಾಮ ಪಂಚಾಯತಿ ಪಿಡಿಓ, ಕಾರ್ಯದರ್ಶಿ, ಡಿಇಒ,ಬಿಎಫ್ಟಿ,ಜಿಕೆಎಂ ಸೇರಿದಂತೆ ನರೇಗಾ ಸಿಬ್ಬಂದಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಅವರು ತಿಳಿಸಿದ್ದಾರೆ.

# ಅಪಘಾತ: ಮಹಿಳೆ ಸಾವು

**ತಾಳಿಕೋಟೆ :** ಇಲ್ಲಿನ ಗುಡ್ನಾಳ -ದೇವರ ಹುಲಗಬಾಳ ಬಳಿ ಬುಧವಾರ ಜಮೀನಿನಿಂದ ರಸ್ತೆಗೆ ಬರುತ್ತಿದ್ದ ಜೀಪ್ ಬೈಕ್‌ಗೆ ಡಿಕ್ಕಿಯಾಗಿ ಮಿಣಜಗಿ ಗ್ರಾಮದ ಪವಿತ್ರಾ ಪ್ರಕಾಶ ಬಿರಾದಾರ(ಬಳಗಾನೂರ)(35) ಮೃತಪಟ್ಟಿದ್ದಾರೆ.



ಮುದ್ದೇಬಿಹಾಳದಿಂದ ಸಂಬಂಧಿಕರ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ಮರಳಿ ಮಿಣಜಿಗಿ ಗ್ರಾಮಕ್ಕೆ ಬರುತ್ತಿದ್ದಾಗ ಬೈಕ್‌ಗೆ ಜೀಪ್ ಡಿಕ್ಕಿಯಾಗಿದ್ದು, ಬೈಕ್ ಮೇಲಿದ್ದ ಪವಿತ್ರಾ ಬಿದ್ದು ತಲೆಗೆ ತೀವ್ರ ಪೆಟ್ಟಾಗಿತ್ತು. ತಾಳಿಕೋಟೆ ಆಸ್ಪತ್ರೆಗೆ ಕರೆದುಕೊಂಡು ಬರುವಷ್ಟರಲ್ಲಿ ಅವರು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದರು. ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ವಿಷಯ ತಿಳಿದು ತಾಳಿಕೋಟೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿದ ಶಾಸಕ ಸಿ.ಎಸ್.ನಾಡಗೌಡ ಅಪ್ಪಾಜಿ ಅವರು ಮೃತ ಮಹಿಳೆಯ ಕುಟುಂಬದವರಿಗೆ ಸಾಂತ್ವನ ಹೇಳಿದರು.

ಮೃತರಿಗೆ ಪತಿ, ಪುತ್ರ, ಇಬ್ಬರು ಪುತ್ರಿಯರು ಇದ್ದಾರೆ. ಅಂತ್ಯಕ್ರಿಯೆ ಗುರುವಾರ ಸ್ವಗ್ರಾಮ ಮಿಣಜಗಿಯಲ್ಲಿ ನೆರವೇರಿಸಲಾಯಿತು.

# ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ ಸಾಲ ಸೌಲಭ್ಯಕ್ಕೆಅರ್ಜಿ ಆಹ್ವಾನ

**ವಿಜಯಪುರ :** ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ವತಿಯಿಂದ ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ನೇರ ಸಾಲ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದ್ದು, ksbdb.karnataka.gov.in ವೆಬ್ ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ಹಸು ಸಾಕಾಣಿಕೆ, ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ, ಟ್ಯಾಕ್ಸಿ ಕೈಗೊಳ್ಳಲು 1 ಲಕ್ಷ ರೂ ಗಳಿಂದ 2 ಲಕ್ಷ ರೂ. ವರೆಗೂ ಸಾಲ ಸೌಲಭ್ಯ ಒದಗಿಸಲಾಗುವುದು.

ಒಂದು ಕುಟುಂಬದಿಂದ ಒಬ್ಬರಿಗೆ ಮಾತ್ರ ಅರ್ಜಿ ಸಲ್ಲಿಸಲು ಅವಕಾಶವಿದ್ದು, ಮಹಿಳೆಯರಿಗೆ ಶೇ.33ರಷ್ಟು ಹಾಗೂ ವಿಶೇಷಚೇತನರಿಗೆ ಶೇ 5ರಷ್ಟು ಮೀಸಲಾತಿ ನೀಡಲಾಗುವುದು. ಅರ್ಜಿದಾರರ ಆಧಾರ್ ಗೆ ಮೊಬೈಲ್ ಸಂಖ್ಯೆ ಲಿಂಕ್ ಆಗಿರಬೇಕು ಹಾಗೂ ಬ್ಯಾಂಕ್ ಖಾತೆ ಸೀಡ್ ಆಗಿರಬೇಕು.

ಈ ಬಗ್ಗೆ ಹೆಚ್ಚಿನ ಮಾಹಿತಿಗಾಗಿ 8762249230 ಸಹಾಯವಾಣಿ ಸಂಖ್ಯೆಗೆಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮನೆ ಮನೆಗೂ ಪೋಲಿಸರ ಭೇಟಿ



**ಬಸವನ ಬಾಗೇವಾಡಿ :** ತಾಲೂಕಿನ ದಿಂಡವಾರ ಗ್ರಾಮದಲ್ಲಿ ಮನೆಮನೆಗೆ ಹೋಗಿ ಪೊಲೀಸ್ ಇಲಾಖೆ ಸಿಬ್ಬಂದಿಗಳು ಮತ್ತು ದಿಂಡವಾರ ಗ್ರಾಮದ ಬೀಟ್ ಗಳಾಗಿರುವ. ಎಮ್ ಎಚ್ ಹುಗ್ಗೆನವರ ಮತ್ತು ಕೊಪ್ಪದ ಇಬ್ಬರು ಪ್ರಾಮಾಣಿಕ ಪೊಲೀಸ್ ಇಲಾಖೆಸಿಬ್ಬಂದಿಗಳುಮತ್ತುಗ್ರಾಮದ ಬೀಟಗಳು ದಿಂಡವಾರ ಗ್ರಾಮದಲ್ಲಿ ಮನೆಮನೆಗೂ ಪೊಲೀಸ್ ವಿನೂತನ ಕಾರ್ಯಕ್ರಮವನು ಹಮ್ಮಿಕೊಂಡರು.

ಮತ್ತು ಸಾರ್ವಜನಿಕರ ಮತ್ತು ಗ್ರಾಮದಲ್ಲಿ ಇರುವ ಮನೆಮನೆಗೂ ಹೋಗಿ ಅವರ ಸಮಸ್ಯೆಯನ್ನು.ಕೇಳಿ ಸಂಬಂಧ ಪಟ್ಟ ಅಧಿಕಾರಿಗಳಿಗೆ ಆ ಸಮಸ್ಯೆ ಬಗ್ಗೆ ಹೇಳಿ ಬಗೆಹರಿಸುವ ಕೆಲಸವನ್ನು ಮಾಡುತ್ತಿದ್ದಾರೆ. ಕುಟುಂಬದಮತ್ತುವಿವಿಧರೀತಿಯಮತ್ತುಸಾಮಾಜಿಕ ಮತ್ತು ಸಾರ್ವಜನಿಕ ಸಮಸ್ಯೆಗಳು ಇದ್ದರೂ ಕೇಳಿ ಸಂಬಂಧ ಪಟ್ಟ ಅಧಿಕಾರಿಗಳಿಗೆ ಮತ್ತು ಸಂಬಂಧಪಟ್ಟ ಕುಟುಂಬದ ಸಮಸ್ಯೆ ಇದ್ದರೆ , ಸಂಬಂಧಪಟ್ಟ ಸಂಬಂಧಿಕರಿಗೆ ಮನವರಿಕೆ ಮಾಡಿ ಮತ್ತು ಸಾರ್ವಜನಿಕರ ಸಮಸ್ಯೆ ಇದ್ದ-ರೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವರಿಕೆ ಮಾಡಿ ಆ ಸಮಸ್ಯೆ ಬಗ್ಗೆ ಹೇಳಿ ಕೂಡಲೇ ಸಮಸ್ಯೆಯನ್ನು ಬಗೆಹರಿಸುವ ಕೆಲಸ ಪೊಲೀಸ್ ಇಲಾಖೆ ಮುಂದಾಗಿದೆ. ಈಗಿನ ಪ್ರಪಂಚದಲ್ಲಿ ಇಂತಹ ನಿಸ್ವಾರ್ಥ ಸೇವೆ ಮತ್ತು ಪ್ರಾಮಾಣಿಕ. ಪೊಲೀಸ್ ಇಲಾಖೆ ಸಿಬ್ಬಂದಿ ಸಮಾಜ ಗ್ರಾಮ ಸುಧಾರಣೆಗೆ ಬಹಳ ಕಟ್ಟು ನಿಟ್ಟಿನ ಸೇವೆಯನ್ನು ಮಾಡುತ್ತಿದ್ದಾರೆ. ಗ್ರಾಮದಲ್ಲಿ ಸಾರ್ವಜನಿಕ ಜಾಗೃತಿ ಮೂಡಿಸುತ್ತಿದ್ದಾರೆ. ಪೊಲೀಸ್ ಇಲಾಖೆ ಸಿಬ್ಬಂದಿ ಸೇವೆ ಮತ್ತು ಕೆಲಸ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ಭೀಮಾ ನದಿಯಲ್ಲಿ ಮುಳುಗಿ ವ್ಯಕ್ತಿ ಸಾವು



**ಇಂಡಿ:**ನದಿಯಲ್ಲಿಮೀನುಹಿಡಿಯಲು ಹೋಗಿ ಟ್ಯೂಬ ಗೆ ಮುಳ್ಳು ಚುಚ್ಚಿ ಪಂಚರ ಆಗಿ ಕಾಲಿಗೆ ಮೀನಿನ ಬಲಿ ಸುತ್ತಿ ನೀರಿನಲ್ಲಿ ಮುಳಗಿ ಸವನ್ನಪಿದ ಘಟನೆ ತಾಲೂಕಿನ ಆಗರಖೇಡ ಗ್ರಾಮದಲ್ಲಿ ನಡೆದಿದೆ. ಎಡುರಾಮ ತಂದೆ ಶಂಕರ ಮೀನಗಾರ (ಭೋವಿ ವರ್ಷ 50 ಎಂಬ ವ್ಯಕ್ತಿ ಸಾವನ್ನಪಿದ ದುರ್ದೈವಿ. ದಿನ ನಿತ್ಯ ಮೀನು ಹಿಡಿದು ಮಾರಾಟ ಮಾಡಿ ಜೇವನ ನಡೆಸುತ್ತಿದ್ದನು. ದಿಡೀರನೆ ಮೃತ ಪಟ್ಟಿದ್ದರಿಂದ ಅವರ ಕುಟುಂಬಕ್ಕೆ ಅಘಾತ ಕಾರಿ ಘಟನೆ ನಡೆದಿದೆ. ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮೃತ ಶವಗಳನ್ನು ಮರೆಣೋತ್ತರ ಪರೀಕ್ಷೆಗಾಗಿ ತಾಲೂಕ ಆಸ್ಪತ್ರೆಯಲ್ಲಿ ಸಾಗಿಸಿದಾಗ ಅಲ್ಲಿ ಕೋಲ್ಡ್ ಸ್ಟೋರೇಜ್ ವ್ಯವಸ್ಥೆ ಇಲ್ಲದಿರುವುದು ಕಳವಳಿ ಕಾರಿ ಸಂಘತಿಯಾಗಿದೆ. ಅದನ್ನು ಕೂಡಲೆ ಶವಗಾರದಲ್ಲಿ ಕೋಲ್ಡ್ ಸ್ಟೋರೇಜ್ ವ್ಯವಸ್ಥೆಯನ್ನು ತಾಲೂಕ ಆಡಳಿತ ಮಾಡಬೇಕು ಎಂದು ಸಾರ್ವಜನಿಕರ ಆಗ್ರಹ ವಾಗಿದೆ.

# ವಿದ್ಯುತ್ ತಂತಿ ತಗುಲಿ ಯುವಕ ಸಾವು



**ಜಮಖಂಡಿ:** ನಗರದ ಶಿಕ್ಕಲಗಾರ ಕಾಲೋನಿಯಲ್ಲಿ ವಿದ್ಯುತ್ ತಂತಿ ತಗುಲಿ ಯುವಕ ಮೃತ ಪಟ್ಟಿರುವ ಘಟನೆ ಜರುಗಿದೆ

ಮೃತ ಯುವಕನನ್ನ ದರ್ಶನ ಶಿಕ್ಕಲಗಾರ(20) ಎಂದು ಗುರ್ತಿಸಲಾಗಿದೆ.

ಸ್ಥಳಕ್ಕೆ ಜಮಖಂಡಿ ಶಹರ ಪೋಲಿಸ್ ಠಾಣೆ ಅಪರಾಧ ವಿಭಾಗದ ಪಿ.ಎಸ್.ಐ ಎನ್. ಕೆ.ಕಾಜಗಾರ,ಸಿಬ್ಬಂದ್ದಿಗಳಾದ ರಾಜು ಶಿಂಘೆ,ಶಿವಾನಂದ ಪಾಟೀಲ,ಐ.ಜಿ.ದಾಶಾಳ,ಭೀಮು ವಾಲಿಕಾರ,ನೇತೃತ್ವದ ಪೋಲಿಸ್ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಬಿದಿರು ಬಡಿಗೆ ಹಿಡಿದು ಏನೋ ಕೆಲಸ ಮಾಡಲು ಹೋದಾಗ ದೇವಸ್ಥಾನದ ಮೇಲೆ ಹಾಯ್ದು ಹೋಗಿರುವ ತಂತಿಗಳು ತಗುಲಿ ದುರ್ಘಟನೆ ಜರುಗಿದೆ ಎಂದು ತಿಳಿದುಬಂದಿದೆ.

ಈ ಕಾಲೂನಿಯ ಮನೆಗಳ ಮೇಲೆ ಅಪಾಯಕಾರಿ ವಿದ್ಯುತ್ ಲೈನಗಳು ಹಾದು ಹೋಗಿದ್ದರಿಂದ ಇಲ್ಲಿಯ ಜನರುತಮ್ಮಜೀವಕೈಯಲ್ಲಿಹಿಡಿದು-ಕೊಂಡು ಜೀವನ ಸಾಗಿಸುತ್ತಿದ್ದಾರೆ.

ಸಂಬಂದಪಟ್ಟ ಅಧಿಕಾರಿಗಳು ಎಚ್ಚತ್ತುಕೊಂಡು ಮನೆ ಮೇಲೆ ಹಾಯಿದು ಹೋಗಿರುವ ವಿದ್ಯುತ್ ತಂತಿ ತೆರವುಗೊಳಿಸಿ, ಸಮಸ್ಯೆ ಬಗೆಹರಿಸಬೇಕು ಎಂದು ಕಾಲೊನಿ ನಿವಾಸಿಗಳು ಆಗ್ರಹಿಸಿದ್ದಾರೆ.

# ವೈದ್ಯಕೀಯ ಕಾಲೇಜು ಹೋರಾಟಕ್ಕೆ ಬೆಂಬಲ

**ವಿಜಯಪುರ :** ನಗರದಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಆಗ್ರಹಿಸಿ ನಡೆಯುತ್ತಿರುವ ಅನಿರ್ಧಿಷ್ಟಾವಧಿ ಧರಣಿ ಬುಧವಾರ 21 ದಿನ ಪೂರೈಸಿತು.

ರೈತ ಮುಖಂಡ ಬಸವರಾಜ ಕುಂಬಾರ ಮಾತನಾಡಿ, ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಗೆ ವಿರೋಧಿಸುವ ರಾಜಕಾರಣಿಗಳಿಗೆ ಜಿಲ್ಲೆಯ ಬಡ ಜನತೆ ತಕ್ಕ ಪಾಠ ಕಲಿಸಲಿದ್ದಾರೆ.

ಇದನ್ನು ಗಮನದಲ್ಲಿಟ್ಟುಕೊಂಡು ನಮ್ಮ ಜಿಲ್ಲೆಯ ಪ್ರಭಾವಿ ಸಚಿವರು ಹಾಗೂ ಶಾಸಕರು ಮುಂದಾಗಿ ಧರಣಿ ನಿರತರಿಗೆ ಪಕ್ಕಾ ಆಶ್ವಾಸನೆ ನೀಡಿ ಧರಣಿ ಅಂತ್ಯಗೊಳಿಸಿ ಅದಷ್ಟು ಬೇಗನೆ ಸರ್ಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆ ಮಾಡಬೇಕು ಎಂದು ಒತ್ತಾಯಿಸಿದರು.

ಅಖಿಲ ಭಾರತೀಯ ಝಾಮ ಝಾಮ್ ಅಸೋಸಿಯೇಷನ್ ರಾಜ್ಯ ಘಟಕದ ಅಧ್ಯಕ್ಷ ಮೊಹಮ್ಮದ್ ಯೂಸುಫ್ ಜಮಾದಾರ ಮಾತನಾಡಿ, ನಮ್ಮ ಸಚಿವರು, ಶಾಸಕರು ಜನ ವಿರೋಧಿ ನೀತಿ ಅನುಸರಿಸುತ್ತಿರುವುದು



ಖಂಡನೀಯ. ಜಿಲ್ಲೆಯ ಜನತೆ ಬಗ್ಗೆ ಇವರಿಗೆ ಕಿಂಚಿತೂ ಕಳಕಳಿ ಇಲ್ಲ,

ಜಿಲ್ಲೆಯ ಆಸ್ತಿಯನ್ನು ಹೇಗೆ ಕೊಳ್ಳೆ ಹೊಡೆಯಬೇಕೆಂಬ

ಉದ್ದೇಶದಿಂದ ಭಂಡತನಕ್ಕೆ ಇಳಿದಿದ್ದಾರೆ, ಮುಂಬರವ ದಿನಗಳಲ್ಲಿ ಭಾರಿ ವಿರೋಧ ವ್ಯಕ್ತ ಆಗುವುದರಲ್ಲಿ ಸಂಶಯ ಇಲ್ಲ ಈಗಾಗಲೇ ಸಾಮಾನ್ಯ ಜನತೆ ಎಚ್ಚೆತು-ಕೊಂಡಿದೆ,

ನಿಮ್ಮ ಅಂತ್ಯದ ಕಾಲ ಸಮಿಸುತ್ತಿದೆ ಎಂದು ಎಚ್ಚರಿಕೆ ನೀಡಿದರು.

ಮಾಜಿ ಶಾಸಕ ವೀರಭದ್ರಪ್ಪ ಹಾಲಹರವಿ ಮಾತನಾಡಿ, ಜಿಲ್ಲೆಯಲ್ಲಿ ಎಷ್ಟು ವೈದ್ಯಕೀಯ ಕಾಲೇಜುಗಳು ಇದ್ದರೂ ಏನು ತಪ್ಪಿಲ್ಲ, ಸರ್ಕಾರ ಆದಷ್ಟು ಬೇಗನೆ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭಿಸಿದಿದ್ದರೆ ಮುಂಬರವ ದಿನಗಳಲ್ಲಿ ಉಗ್ರ ಹೋರಾಟ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ವಿಜಯಪುರ ಜಿಲ್ಲಾ ಸಂಘ ಸಂಸ್ಥೆಗಳ ಒಕ್ಕೂಟದ ಪದಾಧಿಕಾರಿಗಳಾದ ಕೆ.ಎನ್. ಮೇಟಿ, ಡಾ.ಬಾಬು ಸಜ್ಜನ, ಮಹಾದೇವ ದೇವರ,

ಶ್ರೀದೇವಿ ರಜಪೂತ, ಬಿ. ಎಸ್. ನವಲಿ, ಮಂಜುಳಾ ಅಂಗಡಿ, ದಸ್ತಗೀರ ಸಾಲೋಟಗಿ,

ರವಿ ಕಿತ್ತೂರು, ಆರ್. ಡಿ. ಶಿವನಗುತ್ತಿ ಧರಣಿಯಲ್ಲಿ ಪಾಲ್ಗೊಂಡು ಬೆಂಬಲಿಸಿದರು.

ವಿಜಯಪುರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಜಂಬುನಾಥ್ ಕಾಂಚ್ಯಾಣಿ, ಎಂ. ಜಿ. ಯಾದವಾಡ, ಎಸ್. ವೈ. ಗದಗ, ಸೋಮನಗೌಡ ಎಸ್. ಪಾಟೀಲ, ಬಿ. ಎಸ್. ಸಾರವಾಡ ಬೆಂಬಲ ವ್ಯಕ್ತಪಡಿಸಿದರು.

ವಿಜಯಪುರ ಜಿಲ್ಲಾ ಸಮಗಾರ ಹರಳಯ್ಯ ಸಮಾಜದ ಅಧ್ಯಕ್ಷ ಅಶೋಕ ಸೌದಾಗಾರ, ಮುತ್ತಣ್ಣ ಕಬಾಡೆ,

ಸಾಯಬಣ್ಣ ನಿರಂಜನ, ಎಸ್. ಸಿ. ಸಾತಪುತೆ, ಸಿದ್ರಾಮ ಹೊನ್ನಮೋರೆ,

ಯಲ್ಲಪ್ಪ ಸಂಕ್ಯನ್ನವರ, ಪರಮಾನಂದ ಹಳ್ಳೂರ, ಎಂ.ಆರ್ ಸೌದಾಗರ ಬೆಂಬಲ ವ್ಯಕ್ತಪಡಿಸಿ, ಮಾತನಾಡಿದರು.

# ಶಿಫಾ ಜಮಾದಾರಗೆ ಜಿಲ್ಲಾಧಿಕಾರಿ ಡಾ.ಕೆ. ಆನಂದ ಸನ್ಮಾನ

## ರಷ್ಯಾ ನೆಲದಲ್ಲಿ ವಿಜಯಪುರದ ಯುವತಿ ಶಿಫಾ ವಿಶ್ವಶಾಂತಿ ಸಂದೇಶ

**ವರದಿ :ಲಾಲಸಾಬ ಸವಾರಗೋಳ**

**ವಿಜಯಪುರ :** ರಷ್ಯಾ ರಾಜಧಾನಿ ಮಾಸ್ಕೋದಲ್ಲಿ ಎಂಟು ದಿನಗಳ ಕಾಲ ನಡೆದ ವಿಶ್ವ ಯುವ ಶೃಂಗ ಸಭೆಯಲ್ಲಿ ಭಾರತ ದೇಶದಿಂದ ಏಕೈಕ ಯುವ ಪ್ರತಿನಿಧಿಯಾಗಿ ಭಾಗವಹಿಸಿ ವಿಶ್ವ ಶಾಂತಿಯ ಸಂದೇಶ ಸಾರಿದ ವಿಜಯಪುರದ ಹೆಮ್ಮೆಯ ಕುಮಾರಿ ಶಿಫಾ ಜಮಾದಾರ ಅವ-ರಿಗೆ ವಿಜಯಪುರ ಜಿಲ್ಲಾಧಿಕಾರಿ ಡಾ.ಕೆ. ಆನಂದ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಹಾಗೂ ಜಿಲ್ಲಾ ಪೋಲಿಸ್ ಅಧೀಕ್ಷಕರಾದ ಲಕ್ಷ್ಮಣ ನಿಂಬರಗಿ ಹೃದಯಪೂರ್ವಕವಾಗಿ ಸನ್ಮಾನಿಸಿ ಗೌರವಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಡಾ.ಕೆ. ಆನಂದ, ವಿಜಯಪುರದಲ್ಲಿ ಅನೇಕ ದಿನಗಳಿಂದಲೂ ತಮ್ಮ ಸಾಮಾಜಿ-ಕ ಸೇವೆಗಳ ಮೂಲಕ ಹೆಸರು ಮಾಡಿದ್ದ ಶಿಫಾ ಅವರು ಯುವತಿಯರ ಆರೋಗ್ಯ, ಸ್ವಚ್ಚತೆ ಜಾಗೃತಿಯಲ್ಲಿ ಸಕ್ರೀಯವಾಗಿ ತೊಡಗಿಸಿಕೊಂಡಿದ್ದರು, ಈಗ ರಷ್ಯಾದಲ್ಲಿ ನಡೆದ ಸಮಾರಂಭದಲ್ಲಿ ವಿಶ್ವ ಶಾಂತಿಯ



ವಿಷಯವಾಗಿ, ಭಾರತೀಯ ಸಂಸ್ಕೃತಿಯ ಬೆಳಕಿನಲ್ಲಿ ವಿಶ್ವಶಾಂತಿಯ ಸಂದೇಶವನ್ನು ನೀಡುವ ಮೂಲಕ ವಿಜಯಪುರದ ಕೀರ್ತಿ ಹೆಚ್ಚಿಸಿರುವುದು ಸಂತೋಷ ತರಿಸಿದೆ ಎಂದರು.

ಜಿಲ್ಲಾ ಪಂಚಾಯತ ಸಿಇಓ ರಿಷಿ ಆನಂದ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಅತ್ಯಾಧುನಿಕ ಎ-ಐ ತಂತ್ರಜ್ಞಾನ ಆದ-ಾರಿತ ಶೌಚಾಲಯ ನಿರ್ಮಾಣ, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಕಿಟ್ ವಿತರಣೆ ಮಾಡುವ ಮೂಲಕ ಶಿಫಾ ಜಮಾದಾಯ ಉದಯೋನ್ಮುಖ ಸಮಾಜ ಸೇವಕಿಯಾಗಿ ಮುನ್ನಡೆಯುತ್ತಿದ್ದಾರೆ, ರಷ್ಯಾದಲ್ಲಿ ಅನೇಕ ರಾಷ್ಟ್ರಗಳ ಪ್ರಮುಖರ ಸಮಕ್ಷಮದಲ್ಲಿ ವಿಶ್ವ ಶಾಂತಿಯ ಸಂದೇಶ ಸಾರಿರುವುದು ಹೆಮ್ಮೆ ತರಿಸಿದೆ ಎಂದರು.

ಜಿಲ್ಲಾ ಪೋಲಿಸ್ ಅಧೀಕ್ಷಕ ಲಕ್ಷ್ಮಣ ನಿಂಬರಗಿ ಮಾತನಾಡಿ, ವಿಜಯಪುರ ಯುವತಿ ರಷ್ಯಾ ಶೃಂಗ ಸಭೆಯಲ್ಲಿ ಭಾಗವಹಿಸಿ ತಮ್ಮ ವಿಚಾರ ಮಂಡನೆ ಮಾಡಿರುವುದು, ಅದರಲ್ಲೂ ಭಾರತೀಯ ಸಂಸ್ಕೃತಿಯ ಧ್ಯೇಯೋದ್ದೇಶಗಳನ್ನು ಸಾರಿರುವುದು ಸಂತೋಷ ತರಿಸಿದೆ, ಇಡೀ ಜಿಲ್ಲೆ ಹೆಮ್ಮೆ ಪಡುವ ಸಾಧನೆ ಇದಾಗಿದೆ ಎಂದು ಹುರಿದುಂಬಿಸಿದರು.

ಸನ್ಮಾನ ಸ್ವೀಕರಿಸಿದ ಕು.ಶಿಫಾ ಜಮಾದಾರ, ಭಗವಂತನ ಅನುಗ್ರಹ, ವಿಜಯಪುರ ಜಿಲ್ಲೆಯ ಜನತೆಯ ಆಶೀರ್ವಾದ ಬಲ, ತಂದೆ-ತಾಯಿ ಪ್ರೋತ್ಸಾಹದಿಂದ ಈ ಅವಕಾಶ ಪ್ರಾಪ್ತಿಯಾಯಿತು,

ನಿಮ್ಮೆಲ್ಲರ ಮಾರ್ಗದರ್ಶನದಲ್ಲಿ ಜಿಲ್ಲೆಗೆ ಕೀರ್ತಿ ತರುವ ಕೆಲಸವನ್ನು ಮಾಡಲು ಸದಾ ಶ್ರಮಿಸುವೆ, ಈ ದೊಡ್ಡ ಅವಕಾಶ ನನಗೆ ಇನ್ನಷ್ಟೂ ಉತ್ತಮವಾಗಿ ಕಾರ್ಯನಿರ್ವಹಿಸಲು ಅನುಕೂಲವಾಗಿದೆ ಎಂದರು.

# ‘ಅಕ್ಕ ಕೆಫೆ’ ಆರಂಭ: ಗಂಗಾವತಿಯಲ್ಲಿ ‘ಸಂಚಾರ ಕೆಫೆ’ಗೆ ಸಿದ್ಧತೆ

**ಕೊಪ್ಪಳ :** ಆರ್ಥಿಕ ಸ್ವಾವಲಂಬನೆ ಹಾಗೂ ಆಹಾರ ಉದ್ಯಮ ಕ್ಷೇತ್ರದಲ್ಲಿ ಮಹಿಳೆಯರ ಸಹಭಾಗಿತ್ವ ಹೆಚ್ಚಿಸುವ ಉದ್ದೇಶದಿದ್ದಾಗ ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಘೋಷಣೆ ಮಾಡಿದ್ದಅಕ್ಕಕೆಫೆಯಮೊದಲಶಾಖೆಯನ್ನು ಜಿಲ್ಲಾಕೇಂದ್ರದಲ್ಲಿ ಆರಂಭಿಸಲಾಗಿದ್ದು, ಬುಧವಾರ ಕಾರ್ಯಾರಂಭ ಮಾಡಿದೆ.



ಸ್ಥಳೀಯತೆಗೆತಕ್ಕಂತೆಮಹಿಳಾಸಬಲೀಕರಣ ಮತ್ತು ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು ಇಲ್ಲಿನ ಜಿಲ್ಲಾ ಪಂಚಾಯಿತಿ ಗಂಗಾವತಿಯಲ್ಲಿ ಅಕ್ಕ ಕೆಫೆಯನ್ನು ‘ಸಂಚಾರ ಕೆಫೆ’ಯನ್ನಾಗಿ ಮಾರ್ಪಡಿಸಲು ಮುಂದಾಗಿದೆ.

ಗಂಗಾವತಿ ಭಾಗದಲ್ಲಿ ಆನೆಗೊಂದಿ, ಸಾಣಾಪುರ, ಅಂಜನಾದ್ರಿ, ಪಂಪಾಸರೋವರ ಹೀಗೆ ಅನೇಕ ಪ್ರವಾಸೋದ್ಯಮದ ಉತ್ತೇಜನಕ್ಕೆ ಅನುಕೂಲವಾಗುವ ಐತಿಹಾಸಿಕ ಸ್ಥಳಗಳಿವೆ. ವಿಶ್ವವಿಖ್ಯಾತ ಹಂಪಿಗೆ ಬರುವ ದೇಶ, ವಿದೇಶಗಳ ಪ್ರವಾಸಿಗರು ಆನೆಗೊಂದಿ ಭಾಗಕ್ಕೆ ಬರುವುದು ಸಾಮಾನ್ಯ. ಅವರಿಗೆ ಮನೆಯ ಊಟದ ಸ್ವಾದ ಉಣಬಡಿಸಲು ಗಂಗಾವತಿ ತಾಲ್ಲೂಕು ಪ್ರವಾಸೋದ್ಯಮ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಸಂಚಾರ ಅಕ್ಕ ಕೆಫೆ’ ನಿರ್ಮಾಣಕ್ಕೆಸಿದ್ಧತೆಮಾಡಿಕೊಳ್ಳಲಾಗುತ್ತಿದೆ. ಇನ್ನೊಂದುಸಂಚಾರಅಕ್ಕಕೆರೆಕುಕನೂರಿನಲ್ಲಿ ಆರಂಭವಾಗಲಿದೆ. ಈ ಕೆಫೆಗಳು ಬಸ್‌ನಲ್ಲಿ ಸಿದ್ಧತೆ ಮಾಡಲಾಗುತ್ತದೆ. ಅಕ್ಕ ಕೆಫೆ ‘ಒಲವಿನ ಊಟ’ ಎನ್ನುವ ಅಡಿಬರಹ ಹೊಂದಿದೆ.

ಕೊಪ್ಪಳದಲ್ಲಿ ಕಾರ್ಯಾರಂಭ: ಅ. 6ರಂದು ಜಿಲ್ಲಾಕೇಂದ್ರಕ್ಕೆಭೇಟಿನೀಡಿದ್ದಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಹಶೀಲ್ದಾರ್ ಕಚೇರಿ ಆವರಣದಲ್ಲಿ ಆರಂಭಿಸಿರುವ ಅಕ್ಕ ಕೆಫೆ ಉದ್ಘಾಟಿಸಿದ್ದರು. ಈ ಕೇಂದ್ರ ಬುಧವಾರ ಕಾರ್ಯಾರಂಭ ಮಾಡಿದೆ.

ತಹಶೀಲ್ದಾರ್ ಕಚೇರಿ ಆವರಣದಲ್ಲಿ ಉಪನೋಂದಣಾಧಿಕಾರಿ ಕಚೇರಿ, ವಿವಿಧ ಸರ್ಕಾರಿ ಇಲಾಖೆಗಳು ಹಾಗೂ ಉಪವಿಜ್ಞಾನ ಪ್ರಾದೇಶಿಕ ಕೇಂದ್ರಗಳು ಇದ್ದು, ಅಲ್ಲಿನ ಸಿಬ್ಬಂದಿ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಬರುವ ಸಾರ್ವಜನಿಕರಿಗೆ ಕೆಫೆಯಿಂದ ಅನುಕೂಲವಾಗಲಿದೆ.

ಕೌಶಲ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯು ರಾಷ್ಟ್ರೀಯ ಜೀವನೋಪಾಯ ಮಿಷನ್ ಜೊತೆಗೂಡಿ ರಾಜ್ಯಸರ್ಕಾರಜಿಲ್ಲೆಗೆಎರಡುಅಕ್ಕಕೆಫೆಗಳನ್ನು ಮಂಜೂರು ಮಾಡಿದೆ. ಮೊದಲ ಹಂತದಲ್ಲಿ ಕೊಪ್ಪಳದಲ್ಲಿ ಕಾರ್ಯಾರಂಭ ಮಾಡಿದ್ದು, ಇನ್ನೊಂದು ತಿಂಗಳಲ್ಲಿ ಯಲಬುರ್ಗಾದಲ್ಲಿ ಆರಂಭವಾಗಲಿದೆ. ಎರಡನೇ ಹಂತದಲ್ಲಿ ಎಲ್ಲಾ ತಾಲ್ಲೂಕುಗಳಿಗೆ ಕೆಫೆ ಸೌಲಭ್ಯ ಸಿಗಲಿದೆ.

ಜಿಲ್ಲಾ ಪಂಚಾಯಿತಿ ಹಾಗೂ ಮಹಿಳಾ ಸಂಜೀವಿನಿ ಒಕ್ಕೂಟದ ಉಸ್ತುವಾರಿಯಲ್ಲಿ ಅಕ್ಕ ಕೆಫೆ ಕಾರ್ಯನಿರ್ವಹಿಸಲಿದ್ದು, ‘ಅಕ್ಕಂದಿರೇ’ ನಿರ್ವಹಣೆ ಮಾಡುತ್ತಾರೆ.

ಇಲ್ಲಿನ ಕೆಫೆಯಲ್ಲಿ ಅಡುಗೆ ಸಿಬ್ಬಂದಿ, ಸಹಾಯಕರು ಹಾಗೂ ಹೋಟೆಲ್ ಉಸ್ತುವಾರಿಗಳು ಮಹಿಳೆಯರೇ ಇದ್ದಾರೆ. ಬೆಳಿಗ್ಗೆ ಉಪಾಹಾರ, ಮಧ್ಯಾಹ್ನದ ಊಟ, ಸಂಜೆ ಕಾಫಿ, ಟೀ, ದೊರೆಯಲಿದೆ. ಪ್ರತಿ ಮೂರು ತಿಂಗಳಿಗೊಮ್ಮೆ ಜಿಲ್ಲಾ ಮಟ್ಟದ ಸಮಿತಿ ಕೆಫೆಗೆ ಭೇಟಿನೀಡಿ ಶುಚಿತ್ವ, ಆಹಾರದ ಗುಣಮಟ್ಟ, ರುಚಿ ಪರಿಶೀಲಿಸಿ ‘ಅಕ್ಕ ಕೆಫೆ’ ಕಾರ್ಯವೈಖರಿ ಮೇಲೆ ಕಣ್ಗಾವಲು ವಹಿಸಲಿದೆ. ಕೆಫೆಗೆ ಬೇಕಾಗುವ ಕಟ್ಟಡ ಹಾಗೂ ಇನ್ನಿತರ ಸೌಲಭ್ಯವನ್ನು ಎನ್‌ಆರ್‌ಎಲ್‌ಎಂನಿಂದ 15 ಲಕ್ಷ ಮತ್ತು ಜಿಲ್ಲಾ ಪಂಚಾಯಿತಿಯಿಂದ 5 ಲಕ್ಷ ಒದಗಿಸಲಾಗಿದೆ.

# ಅ. 29 ರಿಂದ 31 ರವರೆಗೆ ಕೊಪ್ಪಳ ಜಿಲ್ಲೆಗೆ ಉಪ ಲೋಕಾಯುಕ್ತರ ಭೇಟಿ

## ಹೆಚ್ಚಿನ ಪ್ರಚಾರ ನೀಡಿ-ಉಪ ಲೋಕಾಯುಕ್ತ ನ್ಯಾ. ಬಿ. ವೀರಪ್ಪ

**ಕೊಪ್ಪಳ :** ಅಕ್ಟೋಬರ್ 29. ರಿಂದ 31 ರವರೆಗೆ ನಾವು ಕೊಪ್ಪಳ ಜಿಲ್ಲೆಗೆ ಭೇಟಿ ನೀಡುತ್ತಿರುವ ಮಾಹಿತಿಯನ್ನು ಸ್ಥಳೀಯವಾಗಿ ಆಯಾ ತಾಲ್ಲೂಕಿನ ತಹಶೀಲ್ದಾರರು ಮತ್ತು ಗ್ರಾಮ ಪಂಚಾಯತಿ ಹಂತದಲ್ಲಿ ಹೆಚ್ಚಿನ ಪ್ರಚಾರ ಮಾಡಿ ಈ ಮಾಹಿತಿ ಜನರಿಗೆ ತಿಳಿಯುವಂತಾಗಬೇಕೆಂದು ಗೌರವಾನ್ವಿತ ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ. ವೀರಪ್ಪ ಹೇಳಿದರು.

ಅವರು ಗುರುವಾರ ಲೋಕಾಯುಕ್ತ ಕಚೇರಿ ಬೆಂಗಳೂರಿನಿಂದ ಕೊಪ್ಪಳ ಜಿಲ್ಲೆಯ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ನಡೆಸಿ ಮಾತನಾಡಿದರು.

ಲೋಕಾಯುಕ್ತ ಕಛೇರಿಯಲ್ಲಿ ಕೊಪ್ಪಳ ಜಿಲ್ಲೆಯ 105 ಕೇಸಗಳು ಪೆಂಡಿಂಗ್ ಇವೆ. ಕಂದಾಯ ಇಲಾಖೆ, ತಹಶಿಲ್ದಾರರು, ಸಹಾಯಕ ಆಯುಕ್ತರು ಸೇರಿದಂತೆ ಎಲ್ಲಾ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿ ಅವುಗಳನ್ನು ಕ್ಲಿಯರ್ ಆಗಬೇಕು. ಸರಕಾರಿ ಆಸ್ಪತ್ರೆಗಳಲ್ಲಿ ಯಾವುದೇ ಮಾತ್ರೆಗಳು ಸಿಗದಿದ್ದರೆ ಹೊರಗಡೆ ಬರೆದು ಕೊಡುತ್ತಾರೆ, ಹಾಗೆ ಆಗಭಾರದು. ಆಸ್ಪತ್ರೆಯಲ್ಲಿ ಔಷಧಿಗಳನ್ನು ಕೊಡಬೇಕು. ಕೆಲವು ವೈದ್ಯರುಕೇಂದ್ರಸ್ಥಾನದಲ್ಲಿಇರುವುದಿಲ್ಲ.ಜಿಲ್ಲೆಯಎಲ್ಲಾ ತಾಲ್ಲೂಕಿನಲ್ಲಿ ಅಂಬುಲೆನ್ಸ್ ಇವೆಯಾ. ಜಿಲ್ಲೆಯಲ್ಲಿ ಎಷ್ಟು ನಕಲಿ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎನ್ನುವುದನ್ನು ಪಟ್ಟಿ ಮಾಡಿ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಸರಿಯಾಗಿ ಆಹಾರ ವಿತರಿಸುವುದರ ಜೊತೆಗೆ ಸ್ವಚ್ಚತೆ ಇರುವಂತೆ ನೋಡಿಕೊಳ್ಳಬೇಕು. ಶಿಕ್ಷಣ ಇಲಾಖೆಯಲ್ಲಿ ಶಾಲೆಯ ಎಷ್ಟು ಕಟ್ಟಡಗಳು ಮಳೆಯಿಂದ ಬಿದ್ದು ಹೋಗಿವೆ. ನಗರಸಭೆಯವರು ಎಷ್ಟು ಖಾಸಗಿ ಭೂಮಿ ಅತಿಕ್ರಮಣ ಆಗಿದೆ ಎನ್ನುವುದರ ಮಾಹಿತಿ ನೀಡಬೇಕು. ಆಹಾರ ಸುರಕ್ಷತೆಯ ಅಧಿಕಾರಿಗಳು ಹೋಟೆಲ ಮತ್ತು ರಸ್ತೆಯ ಪಕ್ಕದಲ್ಲಿ ಆಹಾರ ತೈಯಾರಿಸುವವರು ಜನರು ತಿನ್ನುವ ಆಹಾರದಲ್ಲಿ ಕಲರ್ ಹಾಕುತ್ತಾರೆ ಅದೆಲ್ಲವನ್ನು ಹಾಕಬಾರದು ಇದನ್ನು ಎಲ್ಲಾ ಕಡೆ ಹೋಗಿ ಪರಿಶೀಲನೆ ಮಾಡಬೇಕೆಂದು ಆಹಾರ ಸುರಕ್ಷತಾ ಅಧಿಕಾರಿಗಳಿಗೆ ಹೇಳಿದರು.ಕೆಲವೊಂದು ಗ್ರಾಮ ಪಂಚಾಯತಿಗಳಲ್ಲಿ ಸರಿಯಾದ ದಾಖಲೆಗಳನ್ನು ನಿರ್ವಹಿಸುತ್ತಿಲ್ಲ. ಒಂದು ಬೋರವೆಲ್ ವರ್ಷದಲ್ಲಿ ಎಷ್ಟು ಸಲ ಕೆಡಬಹುದು ಆದರೆ ಇವರು ತಿಂಗಳಲ್ಲಿ ಎರಡು ಸಲ ಕೆಟ್ಟಿದೆ ಎಂದು ಅನಾವಶ್ಯಕವಾಗಿ ಬಿಲ್ಲುಮಾಡಿ ದುಡ್ಡು ಹೊಡೆಯುವ ಮೂಲಕ ಪಿಡಿಓ ಮತ್ತು ಗ್ರಾಮ ಪಂಚಾಯತಿ ಅಧ್ಯಕ್ಷರು ಸೇರಿ ಜನರು ಕಟ್ಟಿದ ತೆರಿಗೆಯಲ್ಲಿ ಇವರು ಹಗಲು ದ-ರೋಡೆ ಮಾಡುತ್ತಾರೆ. ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರು ಸಾರ್ವಜನಿಕರ ಪ್ರತಿನಿಧಿಗಳು. ಈ ಕುರಿತು ಮಾಹಿತಿ ಪಡೆಯುವಂತೆ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಅರಣ್ಯ ಇಲಾಖೆಯ ಸರಕಾರಿ ಭೂಮಿ ಜಿಲ್ಲೆಯಲ್ಲಿ ಎಷ್ಟು ಒತ್ತುವರಿಯಾಗಿದೆ. ಜಿಲ್ಲೆಯಲ್ಲಿ ಎಷ್ಟು ಫ್ಯಾಕ್ಟರಿಗಳು, ಕ್ವಾರಿ,ಗಣಿಗಳಿವೆ, ಇದರಲ್ಲಿ ಲೀಗಲ್, ಇಲ್ಲಿಗಲ್ ಎಷ್ಟಿವೆ. ಜಿಲ್ಲೆಯಲ್ಲಿ ಎಷ್ಟು ವಾಹನಗಳಿವೆ ಎನ್ನುವುದರ ಕುರಿತು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮಾಹಿತಿ ನೀಡಬೇಕು. ಕೃಷಿ ಇಲಾಖೆಯಲ್ಲಿ ಜನರು ಅರ್ಜಿ ಹಾಕಿದವರಿಗೆ ಲೋನ ಕೊಡಲ್ಲ. ಅರ್ಜಿ ಹಾಕದವರಿಗೆ ಲೋನ ಕೊಡುತ್ತಿರಾ. ಬೆಳೆ ಪರಿಹಾರವನ್ನು ಹಾಗೆ ಮಾಡುತ್ತಿರಾ, ಬೆಳೆ ಹಾಳಾದವರಿಗೆ ಪರಿಹಾರ ಬಂದಿರುವುದಿಲ್ಲ. ಆದರೆ ಪಕ್ಕದ ಹೊಲದವರಿಗೆ ಪರಿಹಾರ ಬಂದಿರುತ್ತದೆ ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಹೇಳಿದರು.

ಕಾರ್ಮಿಕ ಇಲಾಖೆಯಿಂದ ಜಿಲ್ಲೆಯಲ್ಲಿ ಎಷ್ಟು ಜನರಿಗೆ ಲೇಬರ್ ಕಾರ್ಡ ವಿತರಿಸಿದ್ದಿರಾ. ಎಷ್ಟು ಜನ ಕಾರ್ಮಿಕರಿದ್ದಾರೆ. ಅವರಿಗೆ ಇಎಸ್‌ಐ ಮತ್ತು ಪಿ.ಎಫ್ ಮಾಡಿಸಲಾಗಿದೆಯಾ. ಅವರಿಗೆ ಇನ್ಸೂರೆನ್ಸ್ ಸಹ ಮಾಡಿಸಬೇಕು. ಎಪಿಎಂಸಿ ಹಮಾಲರಿಗೂ ಇನ್ಸೂರೆನ್ಸ ಮಾಡಿಸಿ ಎಂದು ಕಾರ್ಮಿಕ ಅಧಿಕಾರಿಗಳಿಗೆ ಸೂಚನೆ ನೀಡಿದರು. ಪೊಲೀಸರು ಸಿವಿಲ್ ಡಿಸಪ್ಯೂಟಗಳಲ್ಲಿ ಎಂಟರ್ ಆಗುತ್ತಾರೆ, ಅವರಿಗೆ ಇದರಲ್ಲಿ ಭಾ-ಗಿಯಾಗದಂತೆ ನಿರ್ದೇಶನ ನೀಡುವಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಹೇಳಿದರು. ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಈ ಕುರಿತು ಎಲ್ಲಾ ಅಧಿಕಾರಿಗಳನ್ನು ಕರೆಸಿ ಮತ್ತೆ ಸಭೆ ಮಾಡಿ ಯಾವುದೇ ಕೇಸಗಳನ್ನು ಕೊಪ್ಪಳ ಜಿಲ್ಲೆಯಲ್ಲಿ ಬಾಕಿ ಉಳಿಯದಂತೆ ನೋಡಿಕೊಳ್ಳಬೇಕು ಮತ್ತು ಈ ಕುರಿತು ಹೆಚ್ಚಿನ ಪ್ರಚಾರ ನೀಡಬೇಕೆಂದು ಹೇಳಿದರು.

ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಿಂದ ವಿಡಿಯೋ ಸಂವಾದದಲ್ಲಿ ಭಾಗವಹಿಸಿ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಮಾತನಾಡಿ, ಜಿಲ್ಲೆಯಿಂದ ತಮ್ಮಲ್ಲಿ ದಾಖಲಾದ 105 ಕೇಸಗಳನ್ನು ಪೆಂಡಿಂಗ್ ಉಳಿಯದಂತೆ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿದಂತೆ ಇತರೆ ಎಲ್ಲಾ ಅಧಿಕಾರಿಗಳು ಈ ನಿಟ್ಟಿನಲ್ಲಿ ಕೆಲಸ ಮಾಡುತ್ತೆವೆ ಹಾಗೂ ತಾವು ಅಕ್ಟೋಬರ್ 29 ರಿಂದ 31 ರವರೆಗೆ ಜಿಲ್ಲೆಗೆ ಆಗಮಿಸುವ ಮಾಹಿತಿಯನ್ನು ಹೆಚ್ಚಿನ ರೀತಿಯಲ್ಲಿ ಪ್ರಚಾರ ಮಾಡಲಾಗುವುದು ಎಂದು ಹೇಳಿದರು.

ಈ ವಿಡಿಯೋ ಸಂವಾದ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕ ಪ್ರಕಾಶ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ರುದ್ರೇಶಪ್ಪ ಟಿ.ಎಸ್., ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಅಜ್ಜಪ್ಪ ಸೊಗಲದ ಸೇರಿದಂತೆ ಜಿಲ್ಲಾ ಮಟ್ಟದ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಳೆ ವೈಷಮ್ಯ। ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಕೊಲೆ: ನಾಲ್ವರು ಆರೋಪಿಗಳು ಶರಣು

**ಗಂಗಾವತಿ :** ಬಿಜೆಪಿ ಯುವ ಮೋರ್ಚಾ ನಗರ ಘಟಕದ ಅಧ್ಯಕ್ಷ ವೆಂಕಟೇಶ ಜೆ.(34) ಎಂಬುವವರ ಮೇಲೆ ಕಾರಿನಲ್ಲಿ ಬಂದ ಯುವಕರ ಗುಂಪೊಂದು, ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ, ಕೊಲೆ ಮಾಡಿದ್ದು, ಘಟನೆಗೆ ನಗರದ ಜನತೆ ಬೆಚ್ಚಿಬಿದ್ದಿದೆ.

ನಗರದಲೀಲಾವತಿಆಸ್ಪತ್ರೆಸಮೀಪ,ಕೊಪ್ಪಳ ರಸ್ತೆಯಲ್ಲಿ ಮಂಗಳವಾರ ತಡರಾತ್ರಿ ಈ ಘಟನೆ ನಡೆದಿದ್ದು, ಕುತ್ತಿಗೆ, ಮುಖ, ದೇಹದ ತುಂಬೆಲ್ಲ ತೀವ್ರ ಗಾಯಗಳಾಗಿದ್ದವು.

ರಕ್ತದ ಮಡುವಿನಲ್ಲಿ ಬಿದ್ದಿದ್ದ ಅವರನ್ನು ಸರ್ಕಾರಿ

ಆಸ್ಪತ್ರೆಗೆ ಸೇರಿಸಿದ್ದು, ಮೃತಪಟ್ಟಿರುವುದಾಗಿ ವೈದ್ಯರು ದೃಢಪಡಿಸಿದ್ದಾರೆ.

ಸೋಮವಾರ ರಾತ್ರಿ ಚಟಾಟಿ ಮಂಜ ಎನ್ನುವವರ ಕುರಿ ಶೆಡ್‌ನಲ್ಲಿ ವೆಂಕಟೇಶ ಸೇರಿ ಆತನ ಸ್ನೇಹಿತರು ಊಟ ಮಾಡಿ ಮಲಗಿ, ಮಂಗಳವಾರ ಬೆಳಿಗ್ಗೆ 2.15ಕ್ಕೆ ಎಚ್ಚರಗೊಂಡು ದ್ವಿಚಕ್ರ ವಾಹನಗಳಲ್ಲಿ ಹೋಗುತ್ತಿರುವಾಗ ಲೀಲಾವತಿ ಆಸ್ಪತ್ರೆ ಬಳಿ ಇವರನ್ನೇ ಕಾದ ಇಂಡಿಕಾ ಕಾರೊಂದು ವೆಂಕಟೇಶ ಕುಳಿತಿದ್ದ ಬೈಕನ್ನು ಹಿಂಬದಿಯಿಂದ ಡಿಕ್ಕಿ ಹೊಡೆಯಿತು. ಇದರಿಂದ ವೆಂಕಟೇಶ ನೆಲಕ್ಕುರುಳಿದ್ದು, ಸ್ನೇಹಿತರೆಲ್ಲರೂ ಅವರನ್ನು ಎಬ್ಬಿಸಲು ಹೋಗುವಷ್ಟರೊಳಗಡೆ ಕಾರಿನಿಂದ ಇಳಿದ ಯುವಕರ ಗುಂಪೊಂದು ಸಿನಿಮೀಯ ರೀತಿಯಲ್ಲಿ ಲಾಂಗ್ ಹಿಡಿದುಕೊಂಡು ಓಡಿ ಬಂದಿದ್ದು, ಸ್ನೇಹಿತರೆಲ್ಲರೂ ಹೆದರಿ ಓಡಿ ಹೋದರು.

ಯುವಕರ ಗುಂಪು ಮನಬಂದಂತೆ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ, ಕೊಲೆ ಮಾಡಿ, ಪರಾರಿಯಾಗಿದ್ದಾರೆ.

ತಡರಾತ್ರಿಯೇ ಎಸ್‌ಪಿ ರಾಮ್ ಎಲ್ ಅರಸಿದ್ದಿ, ನಗರಠಾಣೆ ಪಿಐ ಪ್ರಕಾಶ ಮಾಳೆ, ಡಿವೈಎಸ್ಪಿ ಸಿದ್ದಲಿಂಗಪ್ಪ ಪೊಲೀಸ್ ಪಾಟೀಲ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬೆಳಿಗ್ಗೆ ರವಿ ಸೇರಿ ಇತರರ ವಿರುದ್ಧ ಪ್ರಕರಣ ದಾಖಲಾಗಿದೆ.

ಪೊಲೀಸ್ ಠಾಣೆ ಮುಂದೆ ಜನಸ್ತೋಮ: ವೆಂಕಟೇಶ ಜೆ. ಅವರ ಕೊಲೆ ವಿಷಯ ತಿಳಿದ ಆತನ ಸ್ನೇಹಿತರು, ಕುಟುಂಬಸ್ಥರು, ಗ್ರಾಮಸ್ಥರು, ವಾರ್ಡಿನವರೆಲ್ಲರೂ ಠಾಣೆ ಬಳಿ ಜಮಾಯಿಸಿದ್ದರು. ಹಾಗೇ ಆರೋಪಿಗಳ ವಾರ್ಡಿನವರು ಸಹ ಠಾಣೆಗೆ ಬಂದಿದ್ದು, ಆಸ್ಪತ್ರೆ, ಕೋರ್ಟ್ ಮುಖ್ಯರಸ್ತೆಯಲ್ಲಿ ನೂರಾರು ಸಂಖ್ಯೆಯ ಜನರು ಜಮಾಯಿಸಿದ್ದರು.

ಶಾಸಕ, ಮಾಜಿ ಶಾಸಕರಿಂದ ಮೃತರ ಕುಟುಂಬಕ್ಕೆ ಸಾಂತ್ವನ: ಶಾಸಕ ಜಿ.ಜನಾರ್ದನರೆಡ್ಡಿ, ಮಾಜಿ ಶಾಸಕ ಪರಣ್ಣ ಮುನವಳ್ಳಿ ಸೇರಿ ಬಿಜೆಪಿ ಪದಾಧಿಕಾರಿಗಳು, ಕಾರ್ಯಕರ್ತರು ವೆಂಕಟೇಶ ನಿವಾಸಕ್ಕೆ ತೆರಳಿ ಕುಟುಂಬಕ್ಕೆ ಸಾಂತ್ವನ ತಿಳಿಸಿದರು.

ನಂತರ ಮಾತನಾಡಿದ ಶಾಸಕ, ‘ವೆಂಕಟೇಶನ ಕೊಲೆ ಅಮಾನವೀಯ. ಈ ಹಿಂದೆಯೇ ಅವರಿಗೆ ಬೇರೆ ವ್ಯಕ್ತಿಗಳಿಂದ ಕೊಲೆ ಬೆದರಿಕೆ ಇರುವ ಬಗ್ಗೆ ಠಾಣೆಯಲ್ಲಿ ಮಾಹಿತಿ ಇತ್ತು. ಪೊಲೀಸರು ಬೆದರಿಕೆ ನೀಡಿದವರನ್ನು ಕರೆಯಿಸಿ, ಎಚ್ಚರಿಕೆ ನೀಡಿ, ಕ್ರಮಕೈಗೊಂಡಿದ್ದರೆ ಈ ಕೊಲೆ ನಡೆಯುತ್ತಿರಲಿಲ್ಲ.

ತಪ್ಪಿತಸ್ಥರಿಗೆ ಕಠಿಣ ಶಿಕ್ಷೆಯಾಗಬೇಕು’ ಎಂದು ಆಗ್ರಹಿಸಿದರು.

ಮಾಜಿ ಶಾಸಕ ಪರಣ್ಣ ಮುನವಳ್ಳಿ ಮಾತನಾಡಿ, ‘ಗಂಗಾವತಿ ಕ್ಷೇತ್ರದಲ್ಲಿ ಪೊಲೀಸರ ವೈಫಲ್ಯದಿಂದ ಸಾಕಷ್ಟು ಕೊಲೆ, ಹಲ್ಲೆ, ದಂಧೆಗಳು ಜರುಗುತ್ತಿವೆ. ಇದು ನಿಯಂತ್ರಣಕ್ಕೆ ಬರಬೇಕು. ಕೂಡಲೇ ತಪ್ಪಿತಸ್ಥರಿಗೆ ಶಿಕ್ಷೆ ಆಗಬೇಕು’ ಎಂದರು.

**ಕೊಲೆಗೆ ಹಳೆ ವೈಷಮ್ಯ ಕಾರಣ**

ಈ ಹಿಂದೆ ತನ್ನ ಸ್ನೇಹಿತನ ಮೇಲೆ ಹಲ್ಲೆ ನಡೆಸಿದ ರವಿ ಭೀಮ ಆಕಾಶ ಇಂದ್ರೇಶ ವಿರೇಶ

ಎನ್ನುವ ಆರೋಪಿಗಳಿಗೆ ಕಾನೂನಿನಡಿ ಶಿಕ್ಷೆ ಆಗುವಂತೆ ಮಾಡಿದ್ದಕ್ಕೆ ದ್ವೇಷದಿಂದ ನನ್ನ ಮಗನನ್ನು ಕೊಲೆ ಮಾಡಿದ್ದಾರೆ’

ಎಂದು ಮೃತವ್ಯಕ್ತಿ ತಂದೆ ಹಂಪಣ್ಣ ಜಂತಕಲ್ ಠಾಣೆಗೆ ದೂರು ನೀಡಿದ್ದು ಪ್ರಕರಣ ದಾಖಲಾಗಿದೆ.

**ಕಂಪ್ಲಿಯಲ್ಲಿ ಆರೋಪಿಗಳು ಶರಣು**

ನಗರದ ಲೀಲಾವತಿ ಆಸ್ಪತ್ರೆ ಬಳಿ ವೆಂಕಟೇಶನನ್ನು ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿ ಕೊಲೆ ಮಾಡಿದ ಆರೋಪಿಗಳು ಮಂಗಳವಾರ ಬೆಳಿಗ್ಗೆ ಕಂಪ್ಲಿ ಪೊಲೀಸ್ ಠಾಣೆಗೆ ಶರಣಾಗಿದ್ದಾರೆ.

ಗಂಗಾವತಿ ಬಸವಣ್ಣ ಕ್ಯಾಂಪಿನ ಭೀಮ ಕರಿಯಪ್ಪ ಅಮರ್ ಭಗತ್ ಸಿಂಗ್ ನಗರದ ಸಲೀಂ ರಫೀಕ್ ಇಂದಿರಾ ನಗರದ ವಿಜಯ್ ಹನುಮಂತಪ್ಪ 28ನೇ ವಾರ್ಡಿನ ಧನರಾಜ ಲಕ್ಷ್ಮಣರಾವ್ ಶರಣಾದ ಆರೋಪಿಗಳು. ಇನ್ನುಳಿದವರ ಬಂಧನಕ್ಕೆ ಪೊಲೀಸರು ಕಾರ್ಯಾಚರಣೆ ನಡೆಸುತ್ತಿದ್ದಾರೆ.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State